ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೧

# ಪಟ್ಟಿ – ೦೩

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತ ನಾಲ್ಕನೇ ಅಧಿವೇಶನ

ಗುರುವಾರ, ದಿನಾಂಕ : ೦೮ನೇ ಫೆಬ್ರವರಿ, ೨೦೧೮

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಗೃಹ ಸಚಿವರು

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

೬. ಅಬಕಾರಿ ಸಚಿವರು

---

## ೩೭೧ (ಜೆ) ಅಡಿಯಲ್ಲಿ ಶೇಕಡ ೮% ರಷ್ಟು ಮೀಸಲಾತಿ ಬಗ್ಗೆ

**ಶ್ರೀ ಅಮರನಾಥ್ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೦ (೨೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶ ಹೊರತುಪಡಿಸಿ ೩೭೧(ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ. ೮% ಮೀಸಲಾತಿಯಲ್ಲಿ ಗೊಂದಲ ಸೃಷ್ಠಿಯಾಗಿ ನ್ಯಾಯಾಲಯದ ವ್ಯಾಜ್ಯದಿಂದ ಇತ್ತೀಚಿಗೆ ತೀರ್ಪಿನ ಪ್ರತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನ್ಯಾಯಾಲಯದ ಆದೇಶ ಪ್ರತಿ ನೀಡುವುದು ;

(ಆ) ಈ ನಿಟ್ಟಿನಲ್ಲಿ ಸರ್ಕಾರ ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗದಲ್ಲಿ ಸಂವಿಧಾನ ೩೭೧(ಜೆ) ಅಡಿಯಲ್ಲಿ ಶೇ. ೮% ಮೀಸಲಾತಿ ನೀಡುವಂತೆ ನ್ಯಾಯಾಲಯ ಆದೇಶ ನೀಡಿದೆಯೇ; ಹಾಗಿದ್ದಲ್ಲಿ, ಈ ಆದೇಶದ ಪ್ರಕಾರ ಆದ ನೇಮಕಾತಿಗಳು ಎಷ್ಟು; ವಿವಿಧ ಇಲಾಖೆಗಳಲ್ಲಿ ಬಡ್ತಿಗಳು ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು ; ಯಾವ ಕಾಲ ಮಿತಿಯೊಳಗೆ ನೇಮಕಾತಿ ಹಾಗೂ ಬಡ್ತಿಗಳನ್ನು ನೀಡಲಾಗುವುದು ? (ಇಲಾಖಾವಾರು, ವಿಭಾಗವಾರು ಸಂಪೂರ್ಣ ವಿವರ ನೀಡುವುದು)

## ೩೭೧ (ಜೆ) ಅಡಿಯ ಮೀಸಲಾತಿಯಲ್ಲಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಅಮರನಾಥ್ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೧ (೨೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ೩೭೧(ಜೆ) ಅಡಿಯಲ್ಲಿ ಕಳೆದ ೨ ವರ್ಷಗಳಿಂದ ಖಾಲಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಿ ನೇಮಕಾತಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ ಅಂತಹ ಸರ್ಕಾರ ಹಾಗೂ ಅರೆ ಸರ್ಕಾರಿ ಇಲಾಖೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ೩೭೧(ಜೆ) ಅಡಿಯಲ್ಲಿರುವ ವೃಂದವಾರು ಹುದ್ದೆಗಳನ್ನು ಗುರುತಿಸಿ ಅಧಿಸೂಚನೆಯನ್ನು ಹೊರಡಿಸುವಲ್ಲಿ ವಿಫಲವಾದ ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳಾವುವು ; (ಮಾಹಿತಿ ನೀಡುವುದು)

(ಇ) ೩೭೧(ಜೆ) ಅಡಿಯ ಮೀಸಲಾತಿಯಲ್ಲಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಆಗುತ್ತಿರುವ ಗೊಂದಲ ಹಾಗೂ ವಿಳಂಬ ಸರ್ಕಾರದ ಗಮನಕ್ಕಿದೆಯೇ ; (ಮಾಹಿತಿ ನೀಡುವುದು)

(ಈ) ಸದರಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಗೊಂದಲ ಹಾಗೂ ವಿಳಂಬ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ಹಾಗೂ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ೩೭೧ (ಜೆ) ಅನುಷ್ಠಾನಗೊಂಡ ನಂತರ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ವರ್ಗೀಕರಣದ ಬಗ್ಗೆ

**ಶ್ರೀ ಅಮರನಾಥ್ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೨ (೨೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ಕಲಂ ೩೭೧ (ಜೆ) ಅನುಷ್ಠಾನಗೊಂಡ ನಂತರ ಇಲಾಖೆಯಲ್ಲಿರುವ ಹುದ್ದೆಗಳನ್ನು ಹೈದ್ರಾಬಾದ್ ಕರ್ನಾಟಕ

ಭಾಗದವರಿಗಾಗಿ ಪ್ರತ್ಯೇಕವಾಗಿ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಜಿಲ್ಲಾವಾರು, ಇಲಾಖಾವಾರು, ವೃಂದವಾರು ವರ್ಗೀಕರಿಸಲಾದ ಹುದ್ದೆಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸಂವಿಧಾನದ ಕಲಂ ೩೭೧ (ಜೆ) ಪ್ರಕಾರ ಹುದ್ದೆಗಳನ್ನು ವರ್ಗೀಕರಿಸಿದ ನಂತರ ಹೈದ್ರಾಬಾದ್ ಕರ್ನಾಟಕ ಆರು ಜಿಲ್ಲೆಗಳಲ್ಲಿನ ಇಲಾಖೆಯಲ್ಲಿ ಖಾಲಿ ಇರುವ ನೇರ ನೇಮಕಾತಿಗಾಗಿ ಹಾಗೂ ಮುಂಬಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಇಲಾಖಾವಾರು, ವೃಂದವಾರು ಹುದ್ದೆಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಸರ್ಕಾರದ ಮುಂದಿರುವ ಕ್ರಮವೇನು ? (ಮಾಹಿತಿ ನೀಡುವುದು)

## ಹೊರಗುತ್ತಿಗೆ ನೌಕರರ ವೇತನದ ಬಗ್ಗೆ

**ಶ್ರೀ ಅಮರನಾಥ್ ಪಾಟೀಲ್ (ಪದವೀಧರರ ಕ್ಷೇತ್ರ):–**

೧೬೩ (೨೦೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಯಾವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ ; (ಜಿಲ್ಲಾವಾರು ಹಾಗೂ ಹುದ್ದೆವಾರು ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಲ್ಲಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಯಾವ ಸಂಸ್ಥೆಗಳಿಗೆ

ಗುತ್ತಿಗೆ–ಹೊರಗುತ್ತಿಗೆಯನ್ನು ನೀಡಲಾಗುತ್ತಿದೆ ; (ಸಂಸ್ಥೆಗಳ ಪೂರ್ಣ ವಿವರ, ಹೊರಗುತ್ತಿಗೆಯನ್ನು ಪಡೆದ ಅವಧಿ ಹಾಗೂ ಮುಕ್ತಾಯವಾದ ಅವಧಿಯ ವಿವರ ನೀಡುವುದು)

(ಇ) ಸದರಿ ಇಲಾಖೆಯಲ್ಲಿ 'ಸಿ' ಮತ್ತು 'ಡಿ' ದರ್ಜೆಯ ನೌಕರರಿಗೆ ಇಲಾಖೆ ನಿಗಧಿಪಡಿಸಿರುವ ವೇತನ ಹಾಗೂ ಹೊರಗುತ್ತಿಗೆ ಪಡೆದ ಸಂಸ್ಥೆಯು ನೀಡುತ್ತಿರುವ ವೇತನವೆಷ್ಟು ; ಸದರಿ ಸಂಸ್ಥೆಯು ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ವೇತನ ಪಾವತಿಸುತ್ತಿದೆಯೇ; ಇಲ್ಲವಾದಲ್ಲಿ, ಸರಿಯಾದ ಸಮಯಕ್ಕೆ ವೇತನ ನೀಡದ ಸಂಸ್ಥೆಗಳಾವುವು ;

(ಈ) ಸದರಿ ನೌಕರರಿಗೆ ಪಿ.ಎಫ್. ಹಣವನ್ನು ನೀಡದೇ ಇರುವ ಸಂಸ್ಥೆಗಳು ಯಾವುವು ; ಸದರಿ ಸಂಸ್ಥೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಉ) ಹೊರಗುತ್ತಿಗೆಯನ್ನು ಖಾಸಗಿ ಸಂಸ್ಥೆಗಳಿಗೆ ನೀಡದೆ ಸರ್ಕಾರವೇ ನೇರವಾಗಿ ವೇತನವನ್ನು ನೀಡಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಮುಂಬಡ್ತಿ ಜೇಷ್ಠತಾ ಪಟ್ಟಿ ಪರಿಷ್ಕರಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೪ (೨೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರಿಗೆ ಮುಂಬಡ್ತಿ ನೀಡುವ ವಿಚಾರಕ್ಕೆ ಸಂಬಂಧಪಟ್ಟಂತೆ ಬಿ.ಕೆ.ಪವಿತ್ರ ವರ್ಸಸ್ ಕೇಂದ್ರ ಸರ್ಕಾರದ ನಡುವಿನ ಪ್ರಕರಣದಲ್ಲಿ ಸುಪ್ರಿಂಕೋರ್ಟ್ ನೀಡಿರುವ ಆದೇಶವೇನು; (ಆದೇಶದ ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಸುಪ್ರೀಂಕೋರ್ಟ್ ಆದೇಶವನ್ನು ಪಾಲನೆ ಮಾಡಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪರಿಷ್ಕೃತ ಪಟ್ಟಿ ತಯಾರಿಸಿದ ಇಲಾಖೆಗಳು ಯಾವುವು ; (ಸಂಪೂರ್ಣ ವಿವರ ಒದಗಿಸುವುದು)

(ಇ) ೧೯೭೮ರ ನಂತರ ರಾಜ್ಯದಲ್ಲಿ ವಿಭಜನೆಗೊಂಡಿರುವ ಇಲಾಖೆಗಳು ಯಾವುವು ; ವಿಭಜನೆಗೊಂಡ ನಂತರ ಈ ಇಲಾಖೆಗಳು ಸುಪ್ರೀಂಕೋರ್ಟ್ ಆದೇಶದ ಪ್ರಕಾರ ೧೯೭೮ರಿಂದ ಅನ್ವಯವಾಗುವಂತೆ ಆದೇಶವನ್ನು ಪಾಲಿಸಬೇಕೆ ಅಥವಾ ವಿಭಜನೆಗೊಂಡ ನಂತರದ ದಿನಗಳಿಂದ ಆದೇಶವನ್ನು ಪಾಲಿಸಬೇಕೆ; (ಇಲಾಖಾವಾರು ವಿವರ ನೀಡುವುದು)

(ಈ) ಈ ವಿಚಾರದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಮತ್ತು ಕಾನೂನು ಇಲಾಖೆಗಳ ಅಭಿಪ್ರಾಯಗಳೇನು ; ಈ ಇಲಾಖೆಗಳು ವಿಭಿನ್ನ ಅಭಿಪ್ರಾಯಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ರಾಜ್ಯ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ;

(ಉ) ಸುಪ್ರೀಂಕೋರ್ಟ್ ತೀರ್ಪನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಟ್ರಾನ್ಸ್‌ಫರ್ ಆಫ್ ಡೆವಲಪ್‌ಮೆಂಟ್ ರೈಟ್ಸ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೫ (೨೪೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ ರಿಂದ ಇಲ್ಲಿಯವರೆಗೆ ಟ್ರಾನ್ಸ್‌ಫರ್ ಆಫ್ ಡೆವಲಪ್‌ಮೆಂಟ್ ರೈಟ್ಸ್ (ಟಿ.ಡಿ.ಆರ್) ಬೆಂಗಳೂರಿನಲ್ಲಿ ಎಷ್ಟು ಪ್ರಕರಣಗಳಿಗೆ ನೀಡಲಾಗಿದೆ ; (ವಲಯವಾರು ವಿವರ ನೀಡುವುದು)

(ಆ) ದೋಷಪೂರಿತ ಟ್ರಾನ್ಸ್‌ಫರ್ ಆಫ್ ಡೆವಲಪ್‌ಮೆಂಟ್ ರೈಟ್ಸ್ (ಟಿ.ಡಿ.ಆರ್) ಪ್ರಕರಣಗಳೆಷ್ಟು ; ಇದಕ್ಕೆ ಹೊಣೆಗಾರರು ಯಾರು; ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧೀನದಲ್ಲಿದ್ದ ಟಿ.ಡಿ.ಆರ್. ವ್ಯವಸ್ಥೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ವಹಿಸಲು ಕಾರಣವೇನು ;

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ವಹಿಸಿದ ಮೇಲೆ ಎಷ್ಟು ಟಿ.ಡಿ.ಆರ್. ಗಳಿಗೆ ಅನುಮತಿ ನೀಡಲಾಗಿದೆ ; ನೀಡಿದ್ದಲ್ಲಿ ಇವುಗಳ ಸಂಪೂರ್ಣ ಮಾಹಿತಿ ನೀಡುವುದು ?

## ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಅಗ್ನಿ ದುರಂತ ಆಗುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೬ (೨೮೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಕೆ.ಆರ್.ಮಾರುಕಟ್ಟೆಯ ಬಾರ್ ಮತ್ತು ರೆಸ್ಟೋರೆಂಟ್‌ನಲ್ಲಿ ಅಗ್ನಿ ದುರಂತ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಗ್ನಿ ದುರಂತದಲ್ಲಿ ಸತ್ತವರ ಹೆಸರು, ವಯಸ್ಸು, ವಿಳಾಸದೊಂದಿಗೆ ಮಾಹಿತಿ ನೀಡುವುದು ;

(ಇ) ಈ ಅಗ್ನಿ ದುರಂತಕ್ಕೆ ಕಾರಣವೇನು ; ಇದಕ್ಕೆ ಹೊಣೆಗಾರರು ಯಾರು ; ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ; (ಮಾಹಿತಿ ನೀಡುವುದು)

(ಈ) ಈ ಅಗ್ನಿ ದುರಂತದಲ್ಲಿ ಪ್ರಾಣ ಕಳೆದು ಕೊಂಡ ಕುಟುಂಬದವರಿಗೆ ಪರಿಹಾರ ಧನ ನೀಡಲಾಗಿದೆಯೇ ; ನೀಡಿದ್ದಲ್ಲಿ, ಕನಿಷ್ಠ ರೂ. ೧೦.೦೦ ಲಕ್ಷಗಳ ಪರಿಹಾರ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ಮಾಹಿತಿ ನೀಡುವುದು)

(ಉ) ಈ ರೀತಿ ಅಗ್ನಿ ದುರಂತ ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾಣಿಜ್ಯ ಮಳಿಗೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೭ (೨೪೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾಣಿಜ್ಯ ಸಂಕೀರ್ಣಗಳ ಸಂಖ್ಯೆ ಎಷ್ಟು; (ಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಮಳಿಗೆಗಳನ್ನು ಎಷ್ಟು ವರ್ಷಗಳಿಗೆ ಭೋಗ್ಯದ ಆಧಾರದ ಮೇಲೆ ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ಸದರಿ ವಾಣಿಜ್ಯ ಸಂಕೀರ್ಣಗಳಿಂದ ಬರುವ ವಾರ್ಷಿಕ ಆದಾಯ ಎಷ್ಟು ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ದೈನಂದಿನ ಆಡಳಿತ ವ್ಯವಹಾರಗಳಿಗೆ ಎಷ್ಟು ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿದೆ ; (ಪೂರ್ಣ ವಿವರ ನೀಡುವುದು)

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾಣಿಜ್ಯ ಸಂಕೀರ್ಣಗಳಿಂದ ಬರುವ ಆದಾಯವನ್ನು ಯಾವ ಯಾವ ಖಾತೆಗಳಿಗೆ ಸಂದಾಯ ಮಾಡಲಾಗುತ್ತಿದೆ ; (ಪೂರ್ಣ ಮಾಹಿತಿ ನೀಡುವುದು)

(ಊ) ಈ ಖಾತೆಗಳಲ್ಲಿ ಜಮಾ ಮಾಡಲಾಗಿರುವ ಹಣವೆಷ್ಟು ? (ವಿವರ ನೀಡುವುದು)

## ನಗರೋತ್ಥಾನ ೩ನೇ ಹಂತದ ಯೋಜನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೮ (೨೬೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಮಾನ್ವಿ ಪುರಸಭೆ, ಕವಿತಾಳ, ಸಿರವಾರ ಪಟ್ಟಣ ಪಂಚಾಯತಿಗಳಲ್ಲಿ ಕುಡಿಯುವ ನೀರಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ಪುರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ನಗರ ಹಾಗೂ ಪುರಸಭೆ, ಪಟ್ಟಣ ಪಂಚಾಯಿತಿಗಳಿಗೆ ನಗರೋತ್ಥಾನ ೩ನೇ ಹಂತದ ಯೋಜನೆಯಲ್ಲಿ ಮಂಜೂರಾಗಿರುವ ಅನುದಾನ ಎಷ್ಟು ?

## ಗುಪ್ತದಳವನ್ನು ಬಲಿಷ್ಠಗೊಳಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯ (೨೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಷ್ಟ್ರದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಘಟನೆಗಳ ಪರಿಣಾಮವನ್ನು ಸಮಯಕ್ಕೆ ಸರಿಯಾಗಿ ಮಾಹಿತಿ ಪಡೆದು ಸೂಕ್ತ ಕ್ರಮ ತೆಗೆದುಕೊಂಡ ಗುಪ್ತದಳವನ್ನು ಸದೃಢಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟದ ಪತ್ರಕರ್ತರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೦ (೨೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಪತ್ರಕರ್ತರಿಗೆ ಮಾಸಾಶನ ನೀಡಲಾಗಿದೆ;

(ಆ) ಮಾಸಾಶನ ನೀಡಲು ನಿಯಮಗಳನ್ನು ಸಡಿಲಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಹಾಗಿದ್ದಲ್ಲಿ, ಪರಿಷ್ಕೃತ ನಿಯಮಗಳು ಯಾವುವು;

(ಇ) ಜಿಲ್ಲಾಮಟ್ಟ ಹಾಗೂ ತಾಲ್ಲೂಕು ಮಟ್ಟದಲ್ಲಿ ಮಾನ್ಯತೆ ಇಲ್ಲದ ಪತ್ರಕರ್ತರಿಗೆ ಗ್ರಾಮೀಣ ಬಸ್‌ಪಾಸ್ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದಕ್ಕೆ ವಿಧಿಸಿರುವ ಮಾನದಂಡಗಳ ನಿಯಮಗಳನ್ನು ಸಡಿಲಿಸಲು ಪತ್ರಕರ್ತರ ಸಂಘಟನೆಗಳ ಒತ್ತಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ನಗರದಲ್ಲಿ ೨೪ x ೭ ಕುಡಿಯುವ ನೀರಿನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೧ (೨೬೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ೨೪ x ೭ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಯೋಜನೆಯ ಕಾಮಗಾರಿಯ ನಿಗಧಿತ ಸಮಯದಲ್ಲಿ ಪ್ರಾರಂಭಿಸಲು ಮತ್ತು ನಿಗಧಿತ ಸಮಯದಲ್ಲಿ ಮುಕ್ತಾಯಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿ ಆವೃತ ಯೋಜನೆಯಡಿಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳು ಎಷ್ಟು; ಈ ಕಾಮಗಾರಿಗಳನ್ನು ನಿಗಧಿತ ಸಮಯದಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ನೂತನ ತಾಲ್ಲೂಕು ಕೇಂದ್ರಗಳಲ್ಲಿ ಪೊಲೀಸ್ ಠಾಣೆ ಸ್ಥಾಪಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೨ (೨೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿರುವ ಕೇಂದ್ರ ಕಾರಾಗೃಹವನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯು ಹೊಸದಾಗಿ ರಚಿಸಿರುವ ತಾಲ್ಲೂಕುಗಳಾಗಿರುವ ಸಿರವಾರ ಹಾಗೂ ಮಸ್ಕಿ ಕೇಂದ್ರಗಳಲ್ಲಿ ಪೊಲೀಸ್ ಠಾಣೆ ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ನೂತನ ತಾಲ್ಲೂಕು ಕೇಂದ್ರವಾಗಿರುವ ಸಿರವಾರ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಯಲ್ಲಿ ನೂತನ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯ ಸರ್ಕಾರಿ ನೌಕರರ ನೂತನ ಪಿಂಚಣಿ ಯೋಜನೆ (NPS) ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೭೩ (೨೯೫+೨೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೂತನ ವಂತಿಗೆ ಆಧಾರಿತ ಪಿಂಚಣಿ ಯೋಜನೆಯನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ;

(ಆ) ಈ ಯೋಜನೆಯ ವ್ಯಾಪ್ತಿಗೆ ಬರುವ ಒಟ್ಟು ನೌಕರರ ಸಂಖ್ಯೆ ಎಷ್ಟು;

(ಇ) ಹೊಸ ಪಿಂಚಣಿ ಯೋಜನೆಯನ್ನು ಹಿಂಪಡೆದು ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೆ ತರುವಂತೆ ಬಾಧಿತ ನೌಕರರು ಒಂದು ದಿನದ ಮುಷ್ಕರ ನಡೆಸಿ ಸರಕಾರಕ್ಕೆ ಮನವಿ ಸಲ್ಲಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಈ) ಹಳೆಯ ಪಿಂಚಣಿ ಯೋಜನೆಯನ್ನು ದೇಶದ ಯಾವ ರಾಜ್ಯಗಳಲ್ಲಿ ಮುಂದುವರೆಸಲಾಗಿದೆ;

(ಉ) ನಮ್ಮ ರಾಜ್ಯದಲ್ಲಿ ಹಳೆಯ ಪಿಂಚಣಿ ಯೋಜನೆಯನ್ನು ಪುನ: ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ;

(ಊ) ಕನಿಷ್ಠ ಪಕ್ಷ ಈ N.P.S. ನೌಕರರಿಗೆ ಡಿ.ಸಿ.ಆರ್.ಜಿ ಮತ್ತು ಕುಟುಂಬ ಪಿಂಚಣಿಗಳನ್ನಾದರೂ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ಒದಗಿಸಿ)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಹಂಚುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೭೪ (೨೬೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಎಷ್ಟು ನಿವೇಶನಗಳನ್ನು ಅಭಿವೃದ್ಧಿಪಡಿಸಲಾಗಿದೆ;

(ಆ) ಈ ನಿವೇಶನಗಳು ಯಾವ ಯಾವ ಪ್ರದೇಶಗಳಲ್ಲಿವೆ;

(ಇ) ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರು ನಗರದ ಸಾರ್ವಜನಿಕರಿಗೆ ಎಷ್ಟು ನಿವೇಶನಗಳನ್ನು ವಿತರಣೆ ಮಾಡಲಾಗಿದೆ? (ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡವುದು)

## ಮಹಾದಾಯಿ ಕಳಸಾ ಬಂಡೂರು ಯೋಜನೆಗಾಗಿ ನಡೆದ ಹೋರಾಟದಲ್ಲಿ ಲಾಠಿ ಚಾರ್ಜ್ ನಡೆದಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೭೫ (೨೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಾದಾಯಿ ಕಳಸಾ ಬಂಡೂರಿ ಯೋಜನೆಗಾಗಿ ನವಲಗುಂದದಲ್ಲಿ ಹೋರಾಟ ಮಾಡುವ ಸಂದರ್ಭದಲ್ಲಿ ನವಲಗುಂದ, ಇಬ್ರಾಹಿಂಪುರ, ಯಮನೂರು, ಅಳಗವಾಡಿ ಮುಂತಾದ ಕಡೆ ನಡೆದ ಹೋರಾಟದಲ್ಲಿ ಲಾಠಿ ಚಾರ್ಜ್ ಮಾಡಿದ್ದು ನಿಜವೇ; ನಿಜವಿದ್ದಲ್ಲಿ, ಕಾರಣಗಳೇನು;

(ಆ) ಇದರಲ್ಲಿ ಎಷ್ಟು ಜನ ರೈತರನ್ನು ಕಾರಣವಿಲ್ಲದೆ ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ; ಎಷ್ಟು ಜನರ ಮೇಲೆ ಯಾವ ಕಲಂಗಳನ್ವಯ ಮೊಕದ್ದಮೆ ಹಾಕಲಾಗಿದೆ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ಒದಗಿಸುವುದು)

(ಇ) ಲಾಠಿ ಚಾರ್ಜ್ ಮಾಡಲು ಆದೇಶ ಮಾಡಿದವರು ಯಾರು, ಅವರು ಯಾವ ಹುದ್ದೆಯ ಅಧಿಕಾರಿಯಾಗಿರುತ್ತಾರೆ; ಯಾವ ಕಾನೂನು ಪ್ರಕಾರ ಲಾಠಿ ಚಾರ್ಜ್‌ಗೆ ಆದೇಶ ಮಾಡಲಾಗಿದೆ;

(ಈ) ಸದರಿ ವಿಷಯದಲ್ಲಿ ಸರ್ಕಾರ ವಿಚಾರಣೆ ಮಾಡಲು ಯಾರ ನೇತೃತ್ವದಲ್ಲಿ ಎಷ್ಟು ಸಮಿತಿಗಳನ್ನು ಸರ್ಕಾರ ರಚಿಸಿದೆ; ಅದರ ನೇತೃತ್ವ ವಹಿಸಿದ ಅಧಿಕಾರಿಗಳು ಮತ್ತು ಇನ್ನಿತರರು ಯಾರು;

(ಉ) ವರದಿಯ ಮುಖ್ಯಾಂಶಗಳೇನು; ಸದರಿ ವರದಿಯಲ್ಲಿ ಯಾವ ಅಧಿಕಾರಿಯನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ; (ವಿವರ ನೀಡುವುದು) ಕಾನೂನು ಬಾಹಿರವಾಗಿ ಲಾಠಿ ಚಾರ್ಜ್ ಮಾಡಲು ಆದೇಶಿಸಿದ ಅಧಿಕಾರಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ವಿಜಯಪುರ ಮಹಾನಗರ ಪಾಲಿಕೆಯ ಲೀಜ಼್ ಆಸ್ತಿಗಳ ಖರೀದಿ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೬ (೨೨೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮಹಾನಗರ ಪಾಲಿಕೆಯ ಲೀಜ್ ಆಸ್ತಿಗಳನ್ನು ಖರೀದಿ ಮಾಡಲು ಇರುವ ಮಾನದಂಡವೇನು;

(ಆ) ವಿಜಯಪುರ ಮಹಾನಗರ ಪಾಲಿಕೆಯ ಲೀಜ್ ಆಸ್ತಿಗಳು ಬಹುತೇಕ ಖರೀದಿಯಾಗಿದ್ದು, ಉಳಿದ ಶೇಕಡಾ ೧೦%ರಷ್ಟು ಖರೀದಿಯನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಉಳಿದ ಮಹಾನಗರ ಪಾಲಿಕೆಯ ಲೀಜ಼್ ಆಸ್ತಿಗಳನ್ನು ಖರೀದಿಸಲು ಯಾವ ಕ್ರಮ ತೆಗೆದುಕೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಮಹಾನಗರ ಪಾಲಿಕೆಯ ಲೀಜ಼್ ಆಸ್ತಿಗಳನ್ನು ಯಾವ ಕಾಲಮಿತಿಯೊಳಗೆ ಖರೀದಿ ಮಾಡಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ವಿಜಯಪುರ ಬಾಗಲಕೋಟ ಜಿಲ್ಲೆಯ ಆರಕ್ಷಕ ಠಾಣೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೭೭ (೧೯೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿರುವ ಆರಕ್ಷಕ ಠಾಣೆಗಳ ಒಟ್ಟು ಸಂಖ್ಯೆ ಎಷ್ಟು; (ಠಾಣೆಗಳ ಹೆಸರು ಮತ್ತು ದೂರವಾಣಿ ಸಂಖ್ಯೆ ಸಮೇತ ವಿವರವಾದ ಮಾಹಿತಿ ನೀಡುವುದು)

(ಆ) ಈ ಠಾಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಇ) ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರಗಳನ್ನು ನೀಡುವುದು)

(ಈ) ಈ ಹುದ್ದೆಗಳು ಎಷ್ಟು ವರ್ಷದಿಂದ ಖಾಲಿ ಇವೆ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ವಿಳಂಬನೀತಿ ಅನುಸರಿಸಲು ಕಾರಣವೇನು; ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಮೆಟ್ರೋ ರೈಲು ನಿಗಮ, ಸಂಸ್ಥೆಯಲ್ಲಿನ ನೌಕರರ ಮುಂಬಡ್ತಿಗೆ Pick And Choose ಮಾರ್ಗ ಅನುಸರಿಸುತ್ತಿರುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೮ (೨೩೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL)ದಲ್ಲಿ ಹಾಲಿ ಕೆಲಸ ನಿರ್ವಹಿಸುತ್ತಿರುವ ಖಾಯಂ ಉದ್ಯೋಗಿಗಳ ಸಂಖ್ಯೆ ಎಷ್ಟು; (ಉದ್ಯೋಗಿಗಳ ಹೆಸರು, ಹುದ್ದೆ ವೃಂದವಾರು ಜ್ಯೇಷ್ಠತಾ ಪಟ್ಟಿಯೊಡನೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನೌಕರರ ಮುಂಬಡ್ತಿಗೆ ಆಂತರಿಕ ಸ್ಪರ್ಧಾತ್ಮಕ ಪರೀಕ್ಷೆ ಇಟ್ಟಿರುವುದು ಕೆ.ಸಿ.ಎಸ್.ಆರ್. ನಿಯುಮಗಳಿಗೆ ಸರಿಹೊಂದುತ್ತದೆಯೇ ವಿವರವಾದ ಮಾಹಿತಿ ನೀಡುವುದು;

(ಇ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL) ಸಂಸ್ಥೆಯು ನೇಮಕಾತಿಗೆ ಮಾತ್ರ ಕರ್ನಾಟಕ ಸರ್ಕಾರದ ಮೀಸಲಾತಿ ನಿಯುಮಗಳನ್ನು ಪಾಲಿಸಿ ಮುಂಬಡ್ತಿಗೆ ನಿಯುಮಗಳನ್ನು ಪಾಲಿಸದಿರಲು ಕಾರಣಗಳೇನು;

(ಈ) ಸರ್ಕಾರ ಹಾಗೂ ಸರ್ಕಾರದ ಇತರೆ ನಿಗಮಗಳು ಮುಂಬಡ್ತಿಗೆ ಜ್ಯೇಷ್ಠತೆಯನ್ನು ಪಾಲಿಸುವಾಗ ಬೆಂಗಳೂರು ಮೆಟ್ರೋ ರೈಲು ನಿಗಮದ ಸಂಸ್ಥೆಯವರು ಪರೀಕ್ಷೆ ನಡೆಸಿ Pick And Choose ಮಾರ್ಗ ಅನುಸರಿಸುತ್ತಿರುವುದು ಸರಿಯೇ;

(ಉ) ಈ ತಾರತಮ್ಯವನ್ನು ಬಗೆಹರಿಸಲು ಸರ್ಕಾರಕ್ಕೆ ಕಾಲಮಿತಿಯಿದೆಯೇ? (ಮಾಹಿತಿ ನೀಡುವುದು)

## ಕರ್ನಾಟಕ ಸರ್ಕಾರದ ಆಡಳಿತ ಇಲಾಖೆ ಅಧೀನದಲ್ಲಿ ಬರುವ ನಿಗಮ/ಅಂಗ ಸಂಸ್ಥೆಗಳ ಮಾಹಿತಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೯ (೨೭೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದಲ್ಲಿರುವ ಆಡಳಿತ ಇಲಾಖೆಗಳು ಎಷ್ಟು; ಅವು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಗಳ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಅವು ಯಾವುವು; (ಇಲಾಖೆವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಆಡಳಿತ ಇಲಾಖೆಗಳ ಅಧೀನದಲ್ಲಿ ಬರುವ ನಿಗಮ/ಅಂಗ ಸಂಸ್ಥೆಗಳು ಯಾವ ಯಾವ ವಿಷಯದಲ್ಲಿ ಆಡಳಿತ ಇಲಾಖೆಯ ಅನುಮೋದನೆ ಪಡೆಯಬೇಕಾಗಿರುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಆಡಳಿತ ಇಲಾಖೆಗಳು ತಮ್ಮ ಅಧೀನದಲ್ಲಿ ಬರುವ ನಿಗಮ/ ಅಂಗ ಸಂಸ್ಥೆಗಳ ಆಡಳಿತದಲ್ಲಿ ಹೊಂದಿರುವ ಅಧಿಕಾರಗಳೇನು ? (ವಿವರವಾದ ಮಾಹಿತಿ ನೀಡುವುದು)

## ಬಾಲ್ಯ ವಿವಾಹ ಪ್ರಕರಣಗಳ ವಿರುದ್ಧ ಹೊಸ ತಿದ್ದುಪಡಿಯಂತೆ ಕೈಗೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೮೦ (೨೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಲ್ಯವಿವಾಹ ನಿಷೇಧ ಕಾಯಿದೆ ೨೦೦೬ಕ್ಕೆ ಮಹತ್ತರವಾದ ತಿದ್ದುಪಡಿಗಳನ್ನು ಕರ್ನಾಟಕ ಸರ್ಕಾರ ಮಾಡಿದ ಮೇಲೆ ಆ ಕಾಯಿದೆಯ ಕುರಿತು ಕರ್ನಾಟಕ ಸರ್ಕಾರ ಪ್ರಚಾರ ಕಾರ್ಯಗಳನ್ನು ಮಾಡಿದೆಯೇ; ಮಾಡಿದ್ದಲ್ಲಿ, ಅವುಗಳ ಕುರಿತು ವಿವರ ನೀಡುವುದು;

(ಆ) ೨೦೦೬ರ ನಂತರ ಎಷ್ಟು ಬಾಲ್ಯ ವಿವಾಹಗಳನ್ನು ಪತ್ತೆ ಹಚ್ಚಲಾಗಿದೆ; ಜಿಲ್ಲಾವಾರು ವಿವರ ನೀಡುವುದು;

(ಇ) ತಿದ್ದುಪಡಿಯಾದ ಕಾಯಿದೆಯಂತೆ ಬಾಲ್ಯವಿವಾಹ ನಡೆಸಿದವರಿಗೆ ಕನಿಷ್ಠ ಒಂದು ವರ್ಷದ ಕಡ್ಡಾಯ ಶಿಕ್ಷೆ ವಿಧಿಸಿರುವ ಪ್ರಕರಣಗಳು ಎಷ್ಟು; ಎಲ್ಲೆಲ್ಲಿ ಈ ರೀತಿಯ ಶಿಕ್ಷೆಯನ್ನು ನೀಡಲಾಗಿದೆ;

(ಈ) ಹೊಸ ತಿದ್ದುಪಡಿಯಂತೆ ಪೋಲೀಸರು ಸ್ವಯಂ ಆಗಿ (Suo moto) ಬಾಲ್ಯವಿವಾಹ ಪ್ರಕರಣಗಳ ವಿರುದ್ಧ ಪ್ರಕರಣ ದಾಖಲಿಸಿ ಬಾಲ್ಯವಿವಾಹಗಳನ್ನು ನಿಲ್ಲಿಸಿದ್ದಾರೆ; ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡಿದ್ದಾರೆ ಮತ್ತು ಎಲ್ಲೆಲ್ಲಿ; ವಿವರ ನೀಡುವುದು;

(ಉ) ಬಾಲ್ಯವಿವಾಹಗಳು ಮೊದಲಿಂದಲೇ ರದ್ದಾದುದು (ವಾಯ್ಡ್ ಅಬ್ ಇನಿಷಿಯೋ) ಎಂದು ರಾಜ್ಯ ಸರ್ಕಾರದ ತಿದ್ದುಪಡಿ ಹೇಳಿರುವುದನ್ನು ಎಷ್ಟು ಪ್ರಕರಣಗಳಲ್ಲಿ ಬಾಲ್ಯವಿವಾಹಕ್ಕೆ ಈಡಾದವರು ಬಳಸಿಕೊಂಡಿದ್ದಾರೆ;

(ಊ) ವಾಯ್ಡ್ ಅಬ್ ಇನಿಷಿಯೋ ಎನ್ನುವುದನ್ನು ಅರ್ಥ ಮಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಏನೇನು;

(ಎ) ವಾಯ್ಡ್ ಅಬ್ ಇನಿಷಿಯೋ ಬಳಸಿದವರಿಗೆ ಸರ್ಕಾರವು ಎಂತಹ ಸಹಾಯ ಮತ್ತು ಸಹಕಾರವನ್ನು ನೀಡಿದೆ?

## ನೀತಿ ಆಯೋಗದ ಅಭಿವೃದ್ಧಿ ಗುರಿಗಳ ಜಾರಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೧ (೨೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಭಾರತ ಸರ್ಕಾರ ಒಪ್ಪಿಕೊಂಡಿದ್ದು, ನೀತಿ ಆಯೋಗದ ಸಲಹೆಯಂತೆ ಅಭಿವೃದ್ಧಿ ಗುರಿಗಳ ಜಾರಿಗಾಗಿ ಕರ್ನಾಟಕ ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ;

(ಆ) ಇಂತಹ ಯೋಜನೆಗಳನ್ನು ಸಿದ್ಧಪಡಿಸುವಲ್ಲಿ ಸರ್ಕಾರದ ಇಲಾಖೆಗಳು, ಸ್ವಯಂಸೇವಾ ಸಂಘಟನೆಗಳು, ಸಂಶೋಧನಾ ಸಂಸ್ಥೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳನ್ನು ಸೇರಿಸಿಕೊಳ್ಳಲಾಗಿದೆಯೇ;

(ಇ) ಇಂತಹ ಯೋಜನೆಯನ್ನು ತಯಾರಿಸುವಾಗ ರಾಜ್ಯದ ಎಲ್ಲಾ ವಿಧಾನ ಸಭಾ ಕ್ಷೇತ್ರಗಳು, ತಾಲ್ಲೂಕುಗಳು, ಗ್ರಾಮಪಂಚಾಯತಿಗಳ ಒಟ್ಟಾರೆ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕ್ರಮ ತೆಗೆದುಕೊಳ್ಳಲಾಗಿದೆಯೇ?

## ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗುತ್ತಿರುವ ವರದಿಯ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೨ (೨೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರ್ಥಿಕ ಮೂಲಭೂತ ಸೌಕರ್ಯ ಕೃಷಿ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ರಾಷ್ಟ್ರಮಟ್ಟದ ರ್‍ಯಾಕಿಂಗ್‌ನಲ್ಲಿ ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗುತ್ತಿರುವ ವರದಿಯು ಸರ್ಕಾರ ಗಮನಕ್ಕೆ ಬಂದಿದೆಯೇ; (ಕಳೆದ ೩ ವರ್ಷಗಳ ವಿವರ ನೀಡುವುದು)

(ಆ) ಈ ರೀತಿಯ ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗಲು ಕಾರಣವೇನು;

(ಇ) ರಾಷ್ಟ್ರ ಮಟ್ಟದಲ್ಲಿ ಕರ್ನಾಟಕ ರಾಜ್ಯದ ಸ್ಥಾನ ನಿರಂತರವಾಗಿ ಮೇಲೆ ತಿಳಿಸಿರುವ ಇಲಾಖೆಗಳಲ್ಲಿ ಕುಸಿಯದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯ ಸರ್ಕಾರ ಹಣಕಾಸಿನ ತೊಂದರೆಯನ್ನು ನೀಗಿಸಲು ಕಲ್ಯಾಣ ನಿಧಿಯಿಂದ ರಾಜ್ಯದ ಖಜಾನೆಗೆ ಹಣ ವರ್ಗಾವಣೆ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೩ (೨೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಹಣಕಾಸಿನ ತೊಂದರೆಯನ್ನು ನೀಗಿಸಲು ವಿಶ್ವವಿದ್ಯಾಲಯಗಳಿಂದ ಹಾಗೂ ಕಾರ್ಮಿಕ ಕಲ್ಯಾಣ ನಿಧಿಯಿಂದ ರಾಜ್ಯದ ಖಜಾನೆಗೆ ಹಣ ವರ್ಗಾವಣೆ ಮಾಡಲು ಪ್ರಯತ್ನಿಸಲಾಗುತ್ತಿದೆ ಎನ್ನುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು ;

(ಆ) ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಇರುವ ರಾಜ್ಯದ ಕಾರ್ಮಿಕ ಕಲ್ಯಾಣ ನಿಧಿ ಹಣವನ್ನು ಸರ್ಕಾರ ಇತರ ಅವಶ್ಯಕತೆಗಳಿಗೆ ಉಪಯೋಗ ಮಾಡಲು ಕಾನೂನಿನಲ್ಲಿ ಅವಕಾಶಗಳಿವೆಯೇ;

(ಇ) ಅದೇ ರೀತಿ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳಿಂದ ಸಂಗ್ರಹಿಸಿರುವ ಹಣವನ್ನು ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಬೇರೆ ಚಟುವಟಿಕೆಗಳಿಗೆ ಉಪಯೋಗಿಸಲು ಅವಕಾಶವಿದೆಯೇ; (ವಿವರ ನೀಡುವುದು) ಈ ಕುರಿತಾಗಿ ಸರ್ಕಾರದ ನಿಲುವೇನು?

## ಬೆಂಗಳೂರಿನ ಇಟ್ಟುಮಡು ರಸ್ತೆ ಅಗಲೀಕರಣದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೮೪ (೧೯೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಹೊರವರ್ತುಲ ರಸ್ತೆಯಲ್ಲಿ ಬರುವ ಜನತಾ ಬಜಾರ್ ಇಟ್ಟುಮಡು ವಾರ್ಡ್‌ಗೆ (ಬನಶಂಕರಿ ೨ನೇ ಹಂತ) ಸೇರಿದ ಇಟ್ಟುಮಡುವಿನಿಂದ AGS Layout ವರೆಗಿನ (ದೊಡ್ಡ ಮೋರಿ) ರಸ್ತೆಯಲ್ಲಿ ವಾಹನ ದಟ್ಟಣೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ರಸ್ತೆ ಅಗಲೀಕರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಮುಖ್ಯಮಂತ್ರಿ ನಗರೋತ್ಥಾನ ಅನುಷ್ಠಾನ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೮೫ (೨೫೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುಖ್ಯಮಂತ್ರಿ ನಗರೋತ್ಥಾನ ಯೋಜನೆಯಡಿಯಲ್ಲಿ ಹಂತವಾರು ಬಿಡುಗಡೆ ಆದ ಅನುದಾನವೆಷ್ಟು; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಆ) ಯೋಜನೆಯಡಿಯಲ್ಲಿ ಹಂತವಾರು ತೆಗೆದುಕೊಂಡು ಕಾಮಗಾರಿಗಳಿಗೆ ಖರ್ಚಾದ ಅನುದಾನವೆಷ್ಟು; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಇ) ಯೋಜನೆಯ ೩ನೇ ಹಂತದಲ್ಲಿ ಮೂಲಭೂತ ಸೌಕರ್ಯವನ್ನು ಅಭಿವೃದ್ಧಿಪಡಿಸಲು ಆಯ್ಕೆಯಾದ ಪಟ್ಟಣಗಳ/ನಗರಗಳ ವಿವರ ನೀಡುವುದು?

## ಮಾದಕ ದ್ರವ್ಯ ಮಾರಾಟಗಾರರ ನಿಯಂತ್ರಣ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೮೬ (೨೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಗಾಂಜಾ (ಮಾದಕದ್ರವ್ಯ) ಬಳಕೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮಾದಕ ವಸ್ತು ಮಾರಾಟಗಾರರು/ಸರಬರಾಜುದಾರರನ್ನು ಬಂಧಿಸಲಾಗಿದೆ; ಎಷ್ಟು ಜನರ ವಿರುದ್ಧ ಮೊಕದ್ದಮೆ ದಾಖಲಿಸಲಾಗಿದೆ; ಆ ಪೈಕಿ ಎಷ್ಟು ಜನರಿಗೆ ಶಿಕ್ಷೆಯನ್ನು ವಿಧಿಸಲಾಗಿದೆ; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಈ) ಶಾಲಾ–ಕಾಲೇಜು ಮಕ್ಕಳು, ಯುವಜನರು ಮತ್ತು ಹಿರಿಯರನ್ನು ಈ ಮಾದಕ ದ್ರವ್ಯ ವ್ಯಸನದಿಂದ ಹೊರ ತರಲು ಸರ್ಕಾರದಿಂದ ಕಾರ್ಯಕ್ರಮಗಳನ್ನೇನಾದರೂ ರೂಪಿಸಲ್ಪಟ್ಟಿದೆಯೇ; ರೂಪಿಸಿದ್ದಲ್ಲಿ, ವಿವರ ನೀಡುವುದು;

(ಉ) ಶಾಲಾ–ಕಾಲೇಜುಗಳಲ್ಲಿ ಈ ವ್ಯಸನದಿಂದ ಆಗುವ ದುಷ್ಪರಿಣಾಮದ ಅರಿವು ಮೂಡಿಸಲು ವಿಚಾರ ಸಂಕಿರಣ/ಸಮಾಲೋಚನೆ ಆಯೋಜಿಸಲ್ಪಟ್ಟಿದೆಯೇ? (ವಿವರಗಳನ್ನು ನೀಡುವುದು)

## ಭ್ರಷ್ಟಾಚಾರ ನಿಗ್ರಹದಳದಿಂದ ನ್ಯಾಯ ದೊರಕಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೭ (೨೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭ್ರಷ್ಟಾಚಾರ ನಿಗ್ರಹದಳ ರಚನೆಯಾದ ದಿನದಿಂದ ಇಲ್ಲಿಯವರೆಗೆ ಎಷ್ಟು ಪ್ರಕರಣಗಳನ್ನು ಕೈಗೆತ್ತಿಕೊಂಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭ್ರಷ್ಟಾಚಾರ ನಿಗ್ರಹದಳವು ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವ ಯಾವ ಪ್ರಕ್ರಿಯೆಗಳನ್ನು ಮಾಡುವ ಅಧಿಕಾರ ಹೊಂದಿದೆ;

(ಇ) ಇಲ್ಲಿಯವರೆಗೆ ಭ್ರಷ್ಟಚಾರ ನಿಗ್ರಹದಳವು ಪ್ರಕರಣಗಳನ್ನು ಕೈಗೆತ್ತಿಕೊಂಡು ನ್ಯಾಯ ದೊರಕಿಸಿದ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಎಲ್ಲಾ ಜಿಲ್ಲೆಗಳಲ್ಲಿ ಭ್ರಷ್ಟಾಚಾರ ನಿಗ್ರಹದಳವು ಕಾರ್ಯ ನಿರ್ವಹಿಸುತ್ತಿದೆಯೇ; ಕಾರ್ಯ ನಿರ್ವಹಿಸುತ್ತಿದ್ದಲ್ಲಿ, ಮೂಲಭೂತ ಸೌಕರ್ಯಗಳಾದ ಕಟ್ಟಡ, ಮಾನವ ಸಂಪನ್ಮೂಲ ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ನೀಡಲಾಗಿದೆಯೇ?

## ಮದ್ಯದಂಗಡಿ ತೆರೆಯಲು ನೀಡುವ ಮಾನದಂಡದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮ (೨೧೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ವಾರ್ಷಿಕವಾಗಿ ಅಬಕಾರಿ ಇಲಾಖೆಯಿಂದ ಸಂಗ್ರಹವಾದ ತೆರಿಗೆ ಹಣವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೩–೧೪ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ಅಬಕಾರಿ ಇಲಾಖೆಯು ಹೊಸದಾಗಿ ಎಷ್ಟು ವೈನ್ ಶಾಪ್‌ಗಳಿಗೆ ಲೈಸೆನ್ಸ್‌ನ್ನು ನೀಡಿದೆ; ಲೈಸೆನ್ಸ್‌ನ್ನು ನೀಡುವಾಗ ಎಮ್.ಆರ್.ಪಿ ಮತ್ತು ಎಮ್.ಎಸ್.ಐ.ಎಲ್. ಮದ್ಯ ಮಾರಾಟ ಶಾಪ್‌ಗಳಿಗೆ ಯಾವ ರೀತಿ ಮಾನದಂಡಗಳನ್ನು ಅನುಸರಿಸಲಾಗುತ್ತದೆ; ಮತ್ತು ಎಷ್ಟು ಲೈಸೆನ್ಸ್‌ನ್ನು ನೀಡಲಾಗಿದೆ;

(ಇ) ಹೀಗೆ ಲೈಸೆನ್ಸ್‌ನ್ನು ನೀಡುವಾಗ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಹಾಗೂ ಹಿಂದುಳಿದ ವರ್ಗಗಳಿಗೆ ಹಂಚಿಕೆಯಲ್ಲಿ ಮೀಸಲಾತಿ ಇದೆಯೇ? (ವಿವರ ನೀಡುವುದು)

## ಅಲ್ಪಸಂಖ್ಯಾತರ ವಿರುದ್ಧ ಇರುವ ಪ್ರಕರಣಗಳನ್ನು ವಾಪಸ್ಸು ಪಡೆದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯ (೨೧೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದೆಲ್ಲೆಡೆ ನಡೆದ ಕೋಮು ಗಲಭೆ ಪ್ರಕರಣಗಳಿಗೆ ಸಂಬಂಧಪಟ್ಟಂತೆ, ಅಲ್ಪಸಂಖ್ಯಾತರ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣಗಳನ್ನು ಹಿಂಪಡೆಯಲು ರಾಜ್ಯ ಸರ್ಕಾರ ನಿರ್ಧರಿಸಿರುವುದು ನಿಜವೇ;

(ಆ) ಕಳೆದ ೮ ವರ್ಷಗಳಲ್ಲಿ ನಡೆದ ಕೋಮು ಗಲಭೆ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ವಿವಿಧ ಮತೀಯ ಸಂಘಟನೆ/ ವ್ಯಕ್ತಿಗಳ ವಿರುದ್ಧ ಎಷ್ಟು ಪ್ರಕರಣ ದಾಖಲಾಗಿದೆ; (ಪ್ರಕರಣವಾರು ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಕೋಮು ಗಲಭೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಎಷ್ಟು ಕ್ರಿಮಿನಲ್ ಪ್ರಕರಣಗಳನ್ನು ಅಭಿಯೋಜನೆಯಿಂದ ಹಿಂಪಡೆಯಲಾಗಿದೆ; (ಧರ್ಮವಾರು ವಿವರವನ್ನು ನೀಡುವುದು)

(ಉ) ಕೇವಲ ಅಲ್ಪಸಂಖ್ಯಾತರ ವಿರುದ್ಧದ ಕ್ರಿಮಿನಲ್ ಪ್ರಕರಣವನ್ನು ಹಿಂಪಡೆಯುವುದರಿಂದ, ಸರ್ಕಾರವು ಪಕ್ಷಪಾತ ನೀತಿ ಅನುಸರಿದಂತಾಗುವುದಿಲ್ಲವೇ;

(ಊ) ಹಿಂದೂ ಸಂಘಟನೆಗಳು ಮತ್ತು ಹಿಂದು ಕಾರ್ಯಕರ್ತರ ಮೇಲಿನ ಪ್ರಕರಣಗಳನ್ನು ಕೈ ಬಿಡುವ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಿದೆ?

## ಸ್ಮಾರ್ಟ್ ಸಿಟಿ ಯೋಜನೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೦ (೨೭೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕೇಂದ್ರ ಪುರಸ್ಕೃತ ಸ್ಮಾರ್ಟ್ ಸಿಟಿ ಯೋಜನೆ ಮಂಜೂರಾಗಿದೆ; ಮತ್ತು ಯಾವ ಹಂತದಲ್ಲಿದೆ;

(ಆ) ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಮತ್ತು ಇದಕ್ಕೆ ಇರುವ ಮಾನದಂಡಗಳೇನು;

(ಇ) ಇಲ್ಲಿಯವರೆಗೆ ಸ್ಮಾರ್ಟ್ ಸಿಟಿ ಯೋಜನೆಯಡಿ ರಾಜ್ಯಕ್ಕೆ ಬಿಡುಗಡೆಯಾದ ಅನುದಾನವೆಷ್ಟು? (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ವಾರ್ತಾ ಇಲಾಖೆಗೆ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೧ (೨೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಾರ್ತಾ ಇಲಾಖೆಯು ಕಾರ್ಯ ನಿರ್ವಹಿಸುತ್ತಿದೆಯೇ; ಕಾರ್ಯನಿರ್ವಹಿಸುತ್ತಿದ್ದಲ್ಲಿ, ಅವರಿಗೆ ಎಲ್ಲಾ ಮೂಲಭೂತ ಸೌಕರ್ಯವನ್ನು ನೀಡಲಾಗಿದೆಯೇ;

(ಆ) ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಾರ್ತಾ ಇಲಾಖೆಯ ಕಾರ್ಯಗಳಾವುವು; ಮತ್ತು ಪ್ರಚಾರ ಮಾಡುತ್ತಿರುವ ಕಾರ್ಯಕ್ರಮಗಳಾವುವು;

(ಇ) ಪ್ರತಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಾರ್ತಾ ಇಲಾಖೆಗೆ ಸರ್ಕಾರ ಯಾವ ಮಾದರಿಯಲ್ಲಿ ಅನುದಾನ ಬಿಡುಗಡೆ ಮಾಡುತ್ತದೆ? (ವಿವರ ನೀಡುವುದು)

# ಬೆಳಗಾವಿ ಮಹಾನಗರದಲ್ಲಿ ಕೋಮು ಗಲಭೆಗಳು ಹೆಚ್ಚಾಗುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೨ (೨೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದಲ್ಲಿ ಇತ್ತೀಚಿಗೆ ಕೋಮು ಗಲಭೆಗಳು ಹೆಚ್ಚಾಗಿ ನಡೆಯುತ್ತಿರುವುದು ಹಾಗೂ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ನಗರದಲ್ಲಿ ಇತ್ತೀಚಿಗೆ ಕೋಮು ಗಲಭೆಗಳು ಯಾವ ಯಾವ ಸ್ಥಳಗಳಲ್ಲಿ ನಡೆದಿವೆ; ಆ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆಯೇ;

(ಇ) ಕೋಮು ಗಲಭೆ ನಡೆದ ಸ್ಥಳಗಳಲ್ಲಿ ಖಾಸಗಿ ಹಾಗೂ ಸರ್ಕಾರದ ಸಿ.ಸಿ. ಕ್ಯಾಮರಾದಲ್ಲಿ ಸೆರೆಯಾದ ವಿಡಿಯೋ ದೃಶ್ಯಾವಳಿಗಳನ್ನು ಸರ್ಕಾರ ಗಮನಿಸಿದೆಯೇ; (ಸಂಪೂರ್ಣ ವಿವರ ಒದಗಿಸುವುದು)

(ಈ) ಹಾಗಿದ್ದಲ್ಲಿ, ಸಿ.ಸಿ. ಕ್ಯಾಮರಾದಲ್ಲಿ ಗಲಭೆ ನಡೆಸಿದ ವ್ಯಕ್ತಿಗಳ ಮಾಹಿತಿ ಸಿಕ್ಕಿದ್ದರೆ ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇಂತಹ ಗಲಭೆಗಳನ್ನು ನಿಯಂತ್ರಿಸಲು ಸರ್ಕಾರವು ಹಾಕಿಕೊಂಡ ಕಟ್ಟುನಿಟ್ಟಿನ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು)

# ಮೇಲ್ದರ್ಜೆಗೇರಿಸಲ್ಪಟ್ಟ ಪುರಸಭೆ, ಪಟ್ಟಣ ಪಂಚಾಯತಿಗಳ ಸಿಬ್ಬಂದಿಗಳು ಎದುರಿಸುತ್ತಿರುವ ಕೊರತೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೩ (೨೦೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೊಡ್ಡ ಗ್ರಾಮ ಪಂಚಾಯತಿಗಳನ್ನು ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೆ ಏರಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ; ಯಾವ ಯಾವ ಹೊಸ ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳಿಗೆ ಎಷ್ಟೆಷ್ಟು ಹುದ್ದೆಗಳನ್ನು ಮಂಜೂರು ಮಾಡಲಾಗಿದೆ; ಹುದ್ದೆಗಳ ಮಂಜೂರುರಾತಿ ನೀಡದೆ ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಮಂಜೂರಾತಿ ನೀಡಲಾಗುವುದು; (ಸಂಪೂರ್ಣ ವಿವರ ಒದಗಿಸುವುದು)

(ಇ) ಅಗತ್ಯ ಹುದ್ದೆಗಳ ಮಂಜೂರಾತಿ ನೀಡುವವರೆಗೆ ಪರ್ಯಾಯವಾಗಿ ಸಿಬ್ಬಂದಿ ಒದಗಿಸುವಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಎಷ್ಟು ಕಾಲಮಿತಿಯೊಳಗೆ ಇಲಾಖೆಯ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುವುದು?

# ಬೆಳಗಾವಿ ಮಹಾನಗರದಲ್ಲಿ ಅಕ್ರಮವಾಗಿ ನೆಲಸಿರುವ ಬಾಂಗ್ಲಾ ವಲಸಿಗರ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೪ (೨೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಮಹಾನಗರದಲ್ಲಿ ಬಾಂಗ್ಲಾ ವಲಸಿಗರು ಅಕ್ರಮವಾಗಿ ನೆಲಸಿರುವ / ವಾಸಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೆಳಗಾವಿ ಮಹಾನಗರದಲ್ಲಿ ನೆಲಸಿರುವ ಬಾಂಗ್ಲಾ ವಲಸಿಗರ ಸಂಖ್ಯೆ ಎಷ್ಟು; ಅಂತಹವರನ್ನು ಗುರುತಿಸಿಲಾಗಿದೆಯೇ; ಅಕ್ರಮ ವಲಸಿಗರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಬಾಂಗ್ಲಾ ವಲಸಿಗರಿಗೆ ಅಕ್ರಮವಾಗಿ ರೇಷನ್‌ಕಾರ್ಡ್, ಆಧಾರ ಕಾರ್ಡ್ ಹಾಗೂ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಸೌಲಭ್ಯ ಒದಗಿಸಲು ನೆರವಾದವರ ಮೇಲೆ ಸರ್ಕಾರ ಕ್ರಮಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಪರಿಶೀಲನೆ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಈ) ಬಾಂಗ್ಲಾ ವಲಸಿಗರು ನಗರದಲ್ಲಿ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಂತಹ ಎಷ್ಟು ಜನರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ? (ವಿವರ ನೀಡುವುದು)

## ಬೆಂಗಳೂರು ಮೆಟ್ರೋ ರೈಲು ವಿಸ್ತರಣೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೫ (೨೦೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅತಿ ದೊಡ್ಡ ನಗರವಾಗಿ ಬೆಳೆಯುತ್ತಿರುವ ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಜನದಟ್ಟಣೆ ಅತಿ ಹೆಚ್ಚಿರುವ ಪ್ರಮುಖ ಪ್ರದೇಶಗಳಿಗೆ ಮೆಟ್ರೋ ರೈಲು ಸಂಪರ್ಕ ಕಲ್ಪಿಸುವ / ವಿಸ್ತರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ;

(ಆ) ಇದ್ದಲ್ಲಿ, ಈಗಾಗಲೇ ಎಷ್ಟು ಕಿ.ಮೀ. ಮೆಟ್ರೋ ರೈಲು ಕಾಮಗಾರಿ ಪೂರ್ಣಗೊಂಡಿದೆ; ಪೂರ್ಣಗೊಂಡಿರುವ ರೈಲು ಮಾರ್ಗ ಬೃಹತ್ ಬೆಂಗಳೂರಿನ ಯಾವ ಯಾವ ಪ್ರದೇಶಕ್ಕೆ ಸಂಪರ್ಕ ಕಲ್ಪಿಸಲಾಗಿದೆ; ಅದಕ್ಕೆ ಪ್ರತಿ ಕಿ.ಲೋ ಮೀಟರಿಗೆ ಖರ್ಚು ಮಾಡಲಾಗಿರುವ ವೆಚ್ಚವೆಷ್ಟು; ಹಾಲಿ ಪ್ರತಿದಿನ ಬರುತ್ತಿರುವ ಆದಾಯವೆಷ್ಟು;

(ಇ) ಮೆಟ್ರೋ ಕಾಮಗಾರಿ ಕೈಗೊಳ್ಳಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಯಾವ ಅನುಪಾತದಲ್ಲಿ ಅನುದಾನ ಒದಗಿಸುತ್ತಿವೆ ಇದಕ್ಕೆ ಈಗಾಗಲೇ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು;

(ಈ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಪ್ರಮುಖ ಜನದಟ್ಟಣೆ ಇರುವ ಯಾವ ಯಾವ ಪ್ರದೇಶಗಳಿಗೆ ಮೆಟ್ರೋ ರೈಲು ಸಂಪರ್ಕ ವಿಸ್ತರಿಸಲು ಸರ್ಕಾರ ಯೋಜನೆ ಸಿದ್ಧಪಡಿಸಿದೆ; ಅದಕ್ಕೆ ತಗಲುವ ವೆಚ್ಚವೆಷ್ಟು; ಅದು ಯಾವ ಹಂತದಲ್ಲಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ ಕಾಲುವೆಯ ಒತ್ತುವರಿ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೬ (೨೭೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಇರುವ ರಾಜಕಾಲುವೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಬೆಂಗಳೂರು ಮಹಾನಗರದಲ್ಲಿ ರಾಜ ಕಾಲುವೆಯ ಒತ್ತುವರಿ ಪರಿಣಾಮದಿಂದಾಗಿ ಮಳೆಯ ನೀರು ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಠಿಸಿರುವುದರ ಜೊತೆಗೆ ಅಪಾರ ನೋವು–ಸಾವು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ರಾಜ ಕಾಲುವೆಯ ಅಕ್ರಮ ಒತ್ತುವರಿ ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಜ ಕಾಲುವೆ ಅಕ್ರಮ ಒತ್ತುವರಿದಾರರ ವಿರುದ್ಧ ಸರ್ಕಾರವು ಯಾವ ಕಾನೂನು ಕ್ರಮಗಳನ್ನು ಕೈಗೊಂಡಿದೆ;

(ಉ) ಈವರೆಗೆ ಎಷ್ಟು ವಿಸ್ತೀರ್ಣದ ರಾಜಕಾಲುವೆಯನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ; ಇನ್ನೂ ಎಷ್ಟು ವಿಸ್ತೀರ್ಣದ ರಾಜಕಾಲುವೆಯು ಒತ್ತುವರಿಯಾಗಿದೆ ಎಂದು ಅಂದಾಜಿಸಲಾಗಿದೆ; ಇದನ್ನು ಯಾವ ಕಾಲಮಿತಿಯಲ್ಲಿ ತೆರವು ಗೊಳಿಸಲಾಗುವುದು; ಇದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರದ ಖಾಲಿ ನಿವೇಶನಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೭ (೨೭೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಖಾಲಿ ನಿವೇಶನಗಳ ಸಂಖ್ಯೆ ಎಷ್ಟು; ಎಷ್ಟು ವರ್ಷಗಳಿಂದ ಖಾಲಿ ಇವೆ; (ಪಾಲಿಕೆ ವಾರು ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿರುವ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಹಾಕುತ್ತಿರುವುದರಿಂದ ನೈರ್ಮಲ್ಯಕ್ಕೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;

(ಇ) ಈ ಸಂಬಂಧವಾಗಿ ನಿವೇಶನದಾರರಿಗೆ ಯಾವ ರೀತಿಯ ಎಚ್ಚರಿಕೆ ಅಥವಾ ನಿರ್ದೇಶನ ನೀಡಲಾಗಿದೆ; (ವಿವರ ನೀಡುವುದು)

(ಈ) ಖಾಲಿ ನಿವೇಶನಕ್ಕೆ ತಂತಿ ಬೇಲಿ ಹಾಕಿ ನಿವೇಶನವನ್ನು ಸ್ವಚ್ಚತೆಯಿಂದ ಇಟ್ಟುಕೊಳ್ಳುವಂತೆ ನಿವೇಶನದಾರರಿಗೆ ನಿರ್ದೇಶನ ನೀಡಲು ಕ್ರಮ ಕೈಗೊಳ್ಳಲಾಗುವುದೇ?

## ಪೂಟ್‌ಪಾತ್ ವ್ಯಾಪಾರಿಗಳ ತೊಂದರೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೮ (೨೭೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಫುಟ್‌ಪಾತ್‌ಗಳು ವ್ಯಾಪಾರಿಗಳ ತಾಣವಾಗಿದ್ದು ರಸ್ತೆಗಳಲ್ಲಿ ವ್ಯಾಪಾರಿಗಳು ಮಾರಾಟ ಮಾಡುತ್ತಿದ್ದರೂ, ಮಹಾನಗರ ಪಾಲಿಕೆ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣವೇನು;

(ಆ) ಅನೇಕ ಫುಟ್‌ಪಾತ್‌ಗಳು ಬೀದಿಬದಿ ವ್ಯಾಪಾರಿಗಳಿಂದ ತುಂಬಿದ್ದರೆ ರಸ್ತೆಯ ಎರಡೂ ಬದಿಗಳಲ್ಲಿ ತಳ್ಳುಗಾಡಿಗಳವರು ಮತ್ತು ಇತರ ಮಾರಾಟಗಾರು ಅಕ್ರಮಿಸಿಕೊಂಡು ಪಾದಚಾರಿಗಳ ಮಾತ್ರವಲ್ಲದೆ ವಾಹನ ಸವಾರರಿಗೂ ತೊಂದರೆಯಾಗುತ್ತಿವ ಬಗ್ಗೆ ಪಾಲಿಕೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳದಿರಲು ಕಾರಣವೇನು;

(ಇ) ಸಂಚಾರಿ ಪೊಲೀಸರ ಸಹಕಾರವನ್ನು ಪಡೆದು ಮಹಾನಗರ ಪಾಲಿಕೆ ಈ ವಿಚಾರದಲ್ಲಿ ಗಂಭೀರವಾಗಿ ಕ್ರಮ ಕೈಗೊಳ್ಳುತ್ತಿದೆಯೇ?

## ರಾಷ್ಟ್ರೀಯ ಹೆದ್ದಾರಿಗಳು ಬಾರ್ ಅಂಡ್ ರೆಸ್ಟೋರೆಂಟ್ ಅನುಮತಿಯ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯ (೨೭೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗೆ ಹೊಂದಿಕೊಂಡ ಬಾರ್ ಅಂಡ್ ರೆಸ್ಟೋರೆಂಟ್‌ಗಳನ್ನು ತೆರೆಯಲು ೨೦೧೭–೧೮ನೇ ಸಾಲಿನಲ್ಲಿ ಅನುಮತಿ ನೀಡಲಾಗಿದೆಯೇ;

(ಆ) ಸುಪ್ರೀಂ ಕೋರ್ಟ್ ಆದೇಶಕ್ಕೆ ಅನುಗುಣವಾಗಿ ನಗರ ಮತ್ತು ಪಟ್ಟಣ ಪ್ರದೇಶಗಳಿಗೆ ಹೊಂದಿಕೊಂಡಿರುವ ಎಷ್ಟು

ಮದ್ಯದಂಗಡಿಗಳಿಗೆ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಮುಂದುವರಿಯಲು ರಾಜ್ಯ ಸರ್ಕಾರ ಅನುಮತಿ ನೀಡಿರುತ್ತದೆ; ಅವುಗಳ ಸಂಪೂರ್ಣ ವಿವರ ನೀಡುವುದು;

(ಇ) ಕಳೆದ ೨ ವರ್ಷಗಳಲ್ಲಿ ರಾಜ್ಯ ಸರ್ಕಾರವು ಅಬಕಾರಿ ಇಲಾಖೆಯಡಿ ಅನುಮತಿ ನೀಡಿರುವ ಮದ್ಯದಂಗಡಿಗಳ ಸಂಖ್ಯೆ ಎಷ್ಟು;

(ಈ) ಬೆಂಗಳೂರು ನಗರ ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯಿಂದ ಅನುಮತಿ ನೀಡಿರುವ ಮದ್ಯದಂಗಡಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಯಲಂಹಕ ವಿಧಾನ ಸಭಾ ಕೇತ್ರದ ಕಾಮಗಾರಿಗಳ ಕುರಿತು

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೦ (೨೭೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ವ್ಯಾಪ್ತಿಯಲ್ಲಿರುವ ಯಲಹಂಕ ವಿಧಾನ ಸಭಾ ಕ್ಷೇತ್ರಕ್ಕೆ ಕಳೆದ ೪ ವರ್ಷಗಳಿಂದ ಬಿಡುಗಡೆ ಮಾಡಲಾಗಿರುವ ಹಣವೆಷ್ಟು;

(ಆ) ಯಾವ ಯಾವ ಕಾಮಗಾರಿಗಳಿಗೆ ಮತ್ತು ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಮಾಡಲಾಗಿರುವ ಹಣ ಎಷ್ಟು; (ಪೂರ್ಣ ವಿವರ ನೀಡುವುದು)

(ಇ) ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಹಾಗೂ ಪೂರ್ಣಗೊಳ್ಳದೆ ಇರುವ ಕಾಮಗಾರಿಗಳೆಷ್ಟು? (ಪೂರ್ಣ ವಿವರ ನೀಡುವುದು)

## ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆದಿರುವ ದೌರ್ಜನ್ಯ ಹಾಗೂ ಲೈಂಗಿಕ ದೌರ್ಜನ್ಯ ಪ್ರಕರಣದ ಬಗ್ಗೆ

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೧ (೨೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೦೮–೦೯ ರಿಂದ ೨೦೧೭–೧೮ ರವರೆಗೆ ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆದಿರುವ ದೌರ್ಜನ್ಯ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಅ ಪೈಕಿ ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಂಧನಕ್ಕೆ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರವನ್ನು ವರ್ಷಾವಾರು, ಪ್ರಕರಣಗಳ ಸಂಖ್ಯೆ ಸಹಿತ ವಿವರ ನೀಡುವುದು)

## ರಾಜ್ಯದಲ್ಲಿ ನಡೆದಿರುವ ಕೊಲೆ ಪ್ರಕರಣಗಳ ವಿವರ

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೨ (೨೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ೨೦೦೮–೦೯ನೇ ಸಾಲಿನಿಂದ ೨೦೧೭–೧೮ರವರೆಗೆ ಹಲವಾರು ಕೊಲೆಗಳು ಆಗಿದ್ದು ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕೊಲೆಯಾದ ಪ್ರಕರಣಗಳ ಸಂಖ್ಯೆ ಎಷ್ಟು; ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಂಧನಕ್ಕೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ಕೊಲೆಯಾದವರ ಕುಟುಂಬಕ್ಕೆ ಪರಿಹಾರ ಧನ ನೀಡಲಾಗಿದೆಯೇ; ಪರಿಹಾರ ಧನವನ್ನು ಎಷ್ಟು ಜನರಿಗೆ/ ಕುಟುಂಬಗಳಿಗೆ ನೀಡಲಾಗಿದೆ; ಬಾಕಿ ಇರುವ ಸಂಖ್ಯೆ ಎಷ್ಟು? (ಸಂಪೂರ್ಣ ವಿವರವನ್ನು ವರ್ಷಾವಾರು, ಜಿಲ್ಲಾವಾರು ನೀಡುವುದು)

## ವಿವಿಧ ಕ್ಷೇತ್ರದ ಗಣ್ಯರಿಗೆ ಭದ್ರತೆಗಾಗಿ ಭದ್ರತಾ ವ್ಯಕ್ತಿಗಳನ್ನು ಒದಗಿಸುತ್ತಿರುವ ಬಗ್ಗೆ

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೩ (೨೧೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ವಿವಿಧ ಕ್ಷೇತ್ರದ ಗಣ್ಯರಿಗೆ ಭದ್ರತೆಗಾಗಿ ಅರಕ್ಷಕ ಭದ್ರತಾ ವ್ಯಕ್ತಿಗಳನ್ನು (ಗನ್ ಮ್ಯಾನ್) ಒದಗಿಸುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ಇದಕ್ಕೆ ಇರುವ ಮಾನದಂಡವೇ; ಯಾವ ಕ್ಷೇತ್ರದಲ್ಲಿ ಕೆಲಸ ಮಾಡಿದವರಿಗೆ ಮತ್ತು ಕೆಲಸ ಮಾಡುತ್ತಿರುವವರಿಗೆ ಅರಕ್ಷಕ ಭದ್ರತಾ ವ್ಯಕ್ತಿಗಳನ್ನು (ಗನ್ ಮ್ಯಾನ್) ಒದಗಿಸಲಾಗುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಎನ್. ಹನುಮೇಗೌಡ, ಮನೆ ವಿಳಾಸ ನಂ. ೫೨/೧ ೨ನೇ ಕ್ರಾಸ್, ೩ನೇ ಮುಖ್ಯ ರಸ್ತೆ ಕಾಮಾಕ್ಷಿಪಾಳ್ಯ

ಬೆಂಗಳೂರು – ೫೬೦೦೭೯ ಇವರಿಗೆ ಸರ್ಕಾರ ಅರಕ್ಷಕ ಭದ್ರತಾ ವ್ಯಕ್ತಿಯನ್ನು (ಗನ್ ಮ್ಯಾನ್) ನೀಡಿರುವುದು ಯಾವ ಮಾನದಂಡದಲ್ಲಿ ಬರುತ್ತದೆ? (ಮಾಹಿತಿಯನ್ನು ಒದಗಿಸುವುದು)

## ಭ್ರಷ್ಟಾಚಾರ ನಿಗ್ರಹದಳ ಸಂಸ್ಥೆಯಲ್ಲಿ ದಾಖಲಾಗಿರುವ ದೂರುಗಳ ಬಗ್ಗೆ

**ಶ್ರೀ ಬಿ. ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೪ (೨೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಷ್ಟಾಚಾರ ನಿಗ್ರಹ ದಳ ಸಂಸ್ಥೆಯಲ್ಲಿ ಮುಖ್ಯಮಂತ್ರಿ, ಸಚಿವರು ಮತ್ತು ಶಾಸಕರುಗಳ ಹಾಗೂ ಇತರರ ವಿರುದ್ಧ ದೂರುಗಳು ದಾಖಲಾಗಿರುವುದು ನಿಜವೇ;

(ಆ) ಹಾಗಿದ್ದರೆ, ಭ್ರಷ್ಟಾಚಾರ ನಿಗ್ರಹ ದಳ ಸಂಸ್ಥೆ ಪ್ರಾರಂಭದಿಂದ ಇರುವರೆವಿಗೆ ಒಟ್ಟು ಎಷ್ಟು ದೂರುಗಳು ದಾಖಲಾಗಿವೆ; ಅಂತಹ ದೂರುಗಳ ವಿವರಗಳ ಪಟ್ಟಿ ಹಾಗೂ ವಿಚಾರಣೆಯ ಹಂತ ಇವುಗಳನ್ನೊಳಗೊಂಡ ಸಂಪೂರ್ಣ ವಿವರ ನೀಡುವುದು;

(ಇ) ಈ ದೂರುಗಳಲ್ಲಿ ಎಫ್ಐಆರ್ ಆದ ದೂರುಗಳ, ಸಂಖ್ಯೆ ಎಷ್ಟು; ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಎಷ್ಟು? (ಸಂಪೂರ್ಣ ವಿವರ ವರ್ಷಾವಾರು ನೀಡುವುದು)

## ಸರಕಾರದ ಆಡಳಿತ ಇಲಾಖೆಗಳು ಮತ್ತು ಅವುಗಳ ಇ–ಮೇಲೆ ವಿಳಾಸದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫ (೨೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದಲ್ಲಿರುವ ಆಡಳಿತ ಇಲಾಖೆಗಳು ಎಷ್ಟು; ಅವು ಯಾವುವು; (ವಿವರ ಮಾಹಿತಿ ನೀಡುವುದು) ಅವುಗಳು ತಮ್ಮದೇ ಆದ ವೆಬ್ ಸೈಟ್ ಹೊಂದಿವೆಯೇ; ಹೌದಾದಲ್ಲಿ ಮಾಹಿತಿಯನ್ನು ನೀಡುವುದು)

(ಆ) ಸರ್ಕಾರವು ಪೇಪರ್ ಲೆಸ್ ಕಛೇರಿಗೆ ಆದ್ಯತೆ ನೀಡುತ್ತಿರುವುದು ನಿಜವೇ; ಯಾವ ಯಾವ ಕಛೇರಿಗಳನ್ನು ಪೇಪರ್ ಲೆಸ್ ಕಚೇರಿಯನ್ನಾಗಿಸಲು ಸರ್ಕಾರದಿಂದ ಕ್ರಮ ವಹಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಸರ್ಕಾರದ ರಾಜ್ಯ ಮಟ್ಟದ ಕಛೇರಿಗಳು ತಮ್ಮ ದೈನಂದಿನ ಕಛೇರಿ ನಿರ್ವಹಣೆಗೆ ಇ-ಮೇಲೆ ವಿಳಾಸವನ್ನು ಹೊಂದಿರುವುದು ನಿಜವೇ; ಹೌದಾದಲ್ಲಿ ರಾಜ್ಯ ಮಟ್ಟದ ಇಲಾಖೆಗಳ ಇ-ಮೇಲ್ ವಿಳಾಸವನ್ನು ಒದಗಿಸುವುದು?

## ಪೌರಾಡಳಿತ ಸ್ಥಳೀಯ ಸಂಸ್ಥೆಗಳ ಆಡಳಿತ ವ್ಯವಸ್ಥೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೬ (೨೭೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪೌರಾಡಳಿತ ಇಲಾಖೆಯ ಅಧೀನದಲ್ಲಿರುವ ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಈ ಸ್ಥಳೀಯ ಸಂಸ್ಥೆಯ ಚುನಾಯಿತ ಸದಸ್ಯರ ಸಂಖ್ಯೆ ಎಷ್ಟು; ನಾಮನಿರ್ದೇಶಿತ ಸದಸ್ಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಇ) ಈ ಸ್ಥಳೀಯ ಸಂಸ್ಥೆಗಳ ವಿವಿಧ ಆದಾಯದ ಮೂಲಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಈ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ವೆಚ್ಚ ಮಾಡಲಾದ ಅನುದಾನವೆಷ್ಟು? (ಜಿಲ್ಲಾವಾರು ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

## ಹೊರಗುತ್ತಿಗೆ ಆಧಾರದ ನೌಕರರ ವೇತನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭ (೧೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ನೌಕರರಿಗೆ ಸರ್ಕಾರ ನಿಗದಿ ಮಾಡಿರುವ ಮಾಸಿಕ ವೇತನ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಮಾನವ ಸಂಪನ್ಮೂಲ ಒದಗಿಸುವ ಏಜೆನ್ಸಿಗಳು ಸರ್ಕಾರ ನೀಡುವ ಅನುದಾನಕ್ಕಿಂತ ಕಡಿಮೆ ವೇತನ ಪಾವತಿಸುತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ನೌಕರರಿಗೆ ಉಂಟಾಗುತ್ತಿರುವ ತೊಂದರೆಯನ್ನು ನಿವಾರಿಸಲು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಈ ರೀತಿ ಮಧ್ಯವರ್ತಿಗಳ ಮೂಲಕ ಕೆಲಸಗಾರರನ್ನು ನೇಮಿಸಿಕೊಳ್ಳದೆ ನೇರವಾಗಿ ಸರ್ಕಾರದ ಮೂಲಕವೇ ಹೊರಗುತ್ತಿಗೆ ಆಧಾರದ ಮೇಲೆ ತುಂಬಿಕೊಳ್ಳಲು ಸರ್ಕಾರದ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಕೆ.ಜಿ.ಐ.ಡಿ. ಇಲಾಖೆಯನ್ನು ಗಣಕೀಕೃತಗೊಳಿಸುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೮ (೨೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಎಲ್ಲಾ ಇಲಾಖೆಗಳು ಗಣಕೀಕೃತಗೊಂಡಿದ್ದರೂ ಕೆ.ಜಿ.ಐ.ಡಿ ಇಲಾಖೆ ಇನ್ನೂ ಗಣಕೀಕೃತಗೊಳ್ಳದಿರಲು ಕಾರಣಗಳೇನು; (ವಿವರ ನೀಡುವುದು)

(ಆ) ಗಣಕೀಕೃತಗೊಳಿಸಲು ಸರ್ಕಾರವು ಯೋಜಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾರ್ಯಗತವಾಗುವುದು; (ವಿವರ ನೀಡುವುದು)

(ಇ) ಧಾರವಾಡ ಜಿಲ್ಲೆಯ ಕೆ.ಜಿ.ಐ.ಡಿ. ಇಲಾಖೆಯನ್ನು ಆಡಿಟ್ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಯಾವ ಸಾಲಿನಲ್ಲಿ ಮಾಡಲಾಗಿದೆ; (ವಿವರ ನೀಡುವುದು)

(ಈ) ಮಾಡದಿದ್ದಲ್ಲಿ, ಯಾವ ವರ್ಷದಿಂದ ಮಾಡಿರುವುದಿಲ್ಲ, ಇದಕ್ಕೆ ಕಾರಣಗಳೇನು, ಇದರಿಂದ ಸರ್ಕಾರದ ಹಣದ ಲೆಕ್ಕಾಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)

## ಸಮಾನ ಕೆಲಸ – ಸಮಾನ ವೇತನ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯ (೨೫೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರಿ ಇಲಾಖೆ, ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಖಾಯಂ ನೌಕರರ ಮಾದರಿಯಲ್ಲೇ "ಸಮಾನ ಕೆಲಸಕ್ಕೆ ಸಮಾನ ವೇತನ" ದ ಅಡಿಯಲ್ಲಿ ವೇತನ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಈ ಬಗ್ಗೆ ನ್ಯಾಯಾಲಯದ ಆದೇಶವೇನಾದರು ಬಂದಿದೆಯೇ; ಇದ್ದಲ್ಲಿ ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು;

(ಆ) ಈ ಪದ್ಧತಿಯು ಸರ್ಕಾರದ ಯಾವ ಯಾವ ಇಲಾಖೆಗಳಿಗೆ ಅನ್ವಯಿಸುತ್ತವೆ ; ಇದರಡಿಯಲ್ಲಿ ಹಾಲಿ ಎಷ್ಟು ಜನರು ಕೆಲಸ ನಿರ್ವಹಿಸುತ್ತಿದ್ದಾರೆ ; (ಇಲಾಖೆವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಪದ್ಧತಿಯನ್ನು ಸರ್ಕಾರವು ಜಾರಿಗೆ ತರಲು ಯಾವ ಕಾಲಮಿತಿಯನ್ನು ನಿಗಧಿಗೊಳಿಸಿಕೊಂಡಿದೆ ? (ವಿವರ ನೀಡುವುದು)

## ಕೊಲೆ ಪ್ರಕರಣಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦(೨೫೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ – ಧಾರವಾಡ ಪೊಲೀಸ್ ಕಮಿಷನರೇಟ್‌ನ ವ್ಯಾಪ್ತಿಯಲ್ಲಿ ೨೦೧೩ರಿಂದ ೨೦೧೭ರ, ಇಲ್ಲಿಯವರೆಗೆ ಎಷ್ಟು ಕೊಲೆ ಪ್ರಕರಣಗಳು ದಾಖಲಾಗಿವೆ ; ವರ್ಷಾವಾರು, ಪ್ರಕರಣವಾರು ವಿವರ ನೀಡುವುದು;

(ಆ) ಆ ಪೈಕಿ ಪತ್ತೆ ಹಚ್ಚಲಾದ ಕೊಲೆ ಪ್ರಕರಣಗಳು ಎಷ್ಟು ; ವರ್ಷಾವಾರು ವಿವರ ನೀಡುವುದು ;

(ಇ) ತನಿಖಾ ಹಂತದಲ್ಲಿ ಬಾಕಿ ಇರುವ ಕೊಲೆ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈವರೆಗೆ ಯಾವುದೇ ಸುಳಿವು ಸಿಗದ ಕೊಲೆ ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; ಸಂಪೂರ್ಣ ವಿವರ ನೀಡುವುದು?

## ಪಟ್ಟಣ ಪಂಚಾಯತಿ, ಪುರ ಸಭೆಗಳಲ್ಲಿನ ಶಾಲೆಗಳ ಅಭಿವೃದ್ಧಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧ (೧೯೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿರುವ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅಭಿವೃದ್ಧಿಯ ಕುರಿತು ಆಯಾ ಸಂಸ್ಥೆಗಳು ಕಳೆದ ೩ ವರ್ಷಗಳಲ್ಲಿ ತೆಗೆದುಕೊಂಡ ಕಾರ್ಯ ಹಾಗೂ ಕಾಮಗಾರಿಗಳು ಯಾವುವು ; (ವರ್ಷಾವಾರು, ಕಾಮಗಾರಿವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಒದಗಿಸಿರುವ ಅನುದಾನದಲ್ಲಿ ಕಳೆದ ೩ ವರ್ಷದಲ್ಲಿ ಖರ್ಚಾದ ಹಣವೆಷ್ಟು ; ಈ ಸ್ಥಳೀಯ ಸಂಸ್ಥೆಗಳಲ್ಲಿರುವ ಪ್ರತಿ ಶಾಲೆಗಳಲ್ಲಿರುವಂತಹ ಮೂಲಭೂತ ಸೌಕರ್ಯಗಳ ಕೊರತೆ–ಗಳೇನು? (ವರ್ಷಾವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಬರುವ ಇಂದಿರಾ ಕ್ಯಾಂಟೀನ್‌ಗಳ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೧೨ (೨೨೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲಾಗಿದೆ ; ಸರಾಸರಿ ಎಷ್ಟು ಜನ ಬಡವರು ಇದರ ಪ್ರಯೋಜನ ಪಡೆದುಕೊಳ್ಳುತ್ತಿದ್ದಾರೆ;

(ಆ) ಸರ್ಕಾರದಿಂದ ಕ್ಯಾಂಟೀನ್ ನಡೆಸಲು ಎಷ್ಟು ಹಣ ನೀಡಲಾಗುತ್ತಿದೆ; (ವಿವರ ನೀಡುವುದು)

(ಇ) ಲಭ್ಯತೆಯ ಪ್ರಮಾಣದ ಶೇಕಡ ೫೦ ಕ್ಕಿಂತ ಕಡಿಮೆ ಜನ ಉಪಯೋಗಿಸುತ್ತಿರುವ ಕ್ಯಾಂಟೀನ್‌ಗಳು ಎಷ್ಟು ಯಾವುವು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೧೩ (೨೮೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಸರ್ಕಾರಿ ಸ್ಥಳ ಹಾಗೂ ಸರ್ಕಾರಿ ಕಟ್ಟಡದ ಕೊರತೆ ಎದುರಿಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಇ) ಕಟ್ಟಡ ಶಿಥಿಲಗೊಂಡಿರುವ ಶಾಲೆಗಳು, ಶೌಚಾಲಯ ಕೊರತೆ ಎದುರಿಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು? (ವಿವರ ನೀಡುವುದು)

## ಅಲ್ಪ ಸಂಖ್ಯಾತರ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯುವ ಸುತ್ತೋಲೆಯನ್ನು ವಾಪಸ್ಸು ಪಡೆದಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೧೪ (೨೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಮು ಗಲಭೆಗಳಲ್ಲಿ ಮತ್ತು ಇತರೆ ಪ್ರಕರಣಗಳಲ್ಲಿ ಮುಗ್ಧ ಅಲ್ಪಸಂಖ್ಯಾತ ಜನರ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಅಭಿಯೋಜನೆಯಿಂದ ಹಿಂಪಡೆಯುವ ಬಗ್ಗೆ ಸುತ್ತೋಲೆ ಹೊರಡಿಸಿದ್ದುದು ನಿಜವೇ ; ನಿಜವಾಗಿದ್ದಲ್ಲಿ, ವಿವರ ನೀಡುವುದು ; ಯಾವ ವರ್ಷದಿಂದ ಯಾವ ವರ್ಷದವರೆಗಿನ ಪ್ರಕರಣಗಳನ್ನು ಹಿಂಪಡೆಯುವ ಸುತ್ತೋಲೆ ಇದಾಗಿತ್ತು ; (ವಿವರ ನೀಡುವುದು)

(ಆ) "ಕೋಮುಗಲಭೆ ಮತ್ತು ಇತರೆ ಪ್ರಕರಣಗಳು" ಎಂದರೆ ಯಾವ ರೀತಿಯ ಪ್ರಕರಣಗಳನ್ನು ಹಿಂಪಡೆಯುವ ಬಗ್ಗೆ ಸರ್ಕಾರ ಮುಂದಾಗಿತ್ತು ;

(ಇ) ಈ ರೀತಿ ಅಲ್ಪಸಂಖ್ಯಾತರಿಗೆ ಮಾತ್ರ ಅನುಕೂಲವಾಗುವ ರೀತಿ ಸುತ್ತೋಲೆ ಹೊರಡಿಸಲು ಕಾರಣವೇನು ;

(ಈ) ಕೋಮು ಗಲಭೆಗಳಲ್ಲಿ ಇತರೆ ಕೋಮಿನಲ್ಲಿ ಮುಗ್ಧ ಜನರಿಲ್ಲವೆಂದು ಸರ್ಕಾರದ ಅಭಿಪ್ರಾಯವೇ ;

(ಉ) ಸದರಿ ಸುತ್ತೋಲೆಯನ್ನು ವಾಪಸ್ಸು ಪಡೆಯಲಾಗಿರುವುದು ನಿಜವೇ; ನಿಜವಾಗಿದ್ದಲ್ಲಿ, ವಾಪಸ್ಸು ಪಡೆಯಲು ಪ್ರಮುಖ ಕಾರಣವೇನು?

## ಬೆಳ್ಳಂದೂರು ಕೆರೆಯಲ್ಲಿ ಪದೇ ಪದೇ ಬೆಂಕಿ ಹಾಗೂ ನೊರೆ ಕಾಣಿಸಿಕೊಳ್ಳುತ್ತಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೧೫ (೨೪೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಬೆಳ್ಳಂದೂರು ಕೆರೆಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು ನಿಜವೇ ;

(ಆ) ಹಾಗಿದ್ದಲ್ಲಿ, ಬೆಂಕಿ ನಂದಿಸಲು ತೆಗೆದುಕೊಂಡ ಕಾಲಾವಧಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಕೆರೆಯಲ್ಲಿ ಯಾವ ರೀತಿಯ ತ್ಯಾಜ್ಯ ರಸಾಯನಿಕ ಸೇರಿಕೊಳ್ಳುತ್ತಿದೆ; ಇದು ಯಾವ ಮೂಲಗಳಿಂದ ಕೆರೆಯನ್ನು ಸೇರುತ್ತಿದೆ ; (ವಿವರ ನೀಡುವುದು)

(ಈ) ಕೆರೆಯನ್ನು ಸೇರುತ್ತಿರುವ ಸಂಸ್ಕರಣಗೊಳ್ಳದೆ ಇರುವ ತ್ಯಾಜ್ಯ ಹಾಗೂ ಕಲುಷಿತ ನೀರಿನ ಪ್ರಮಾಣವೆಷ್ಟು ;

(ಉ) ಆಗಸ್ಟ್ ೨೦೧೭ರಂದು ಇದೇ ಕೆರೆಯಲ್ಲಿ ಅಗಾಧ ಪ್ರಮಾಣದ ನೊರೆ ಕಾಣಿಸಿಕೊಂಡಾಗ ಕೆರೆಯನ್ನು ಸೇರುತ್ತಿದ್ದ ಕಲುಷಿತ ನೀರಿನ ಪ್ರಮಾಣವೆಷ್ಟು ?

## ತೆರಿಗೆ ಸಂಗ್ರಹ ಮಾಡದೆ ಇರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೧೬ (೨೭೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಯಾವ್ಯಾವ ಸರ್ಕಾರಿ ಕಟ್ಟಡ, ವಸತಿ ಗೃಹಗಳು ಮತ್ತು ವಾಣಿಜ್ಯ ಸಂಕೀರ್ಣಗಳಿಂದ ತೆರಿಗೆ ಸಂಗ್ರಹ ಮಾಡಲಾಗುತ್ತಿದೆ; (ವರ್ಷವಾರು, ಇಲಾಖಾವಾರು ಸಂಪೂರ್ಣ ವಿವರ ನೀಡುವುದು)

(ಆ) ತೆರಿಗೆ ವಸೂಲಿಯಾಗದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಎಷ್ಟು ವರ್ಷಗಳಿಂದ ಬಾಕಿ ಉಳಿಸಿಕೊಳ್ಳಲಾಗಿದೆ ; (ಇಲಾಖಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ತೆರಿಗೆ ವಸೂಲಿಗೆ ಈವರೆಗೆ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಸ್ವಚ್ಛತೆಯ ಯಂತ್ರ / ವಾಹನಗಳನ್ನು ಉಪಯೋಗಿಸದೆ ಇರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೭ (೨೦೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರ ಸಭೆಯ ವ್ಯಾಪ್ತಿಯಲ್ಲಿ ಸ್ವಚ್ಛತೆಯ ಸಲುವಾಗಿ ಅತ್ಯಾಧುನಿಕ ಯಂತ್ರ / ವಾಹನಗಳನ್ನು ಖರೀದಿ / ಗುತ್ತಿಗೆ ಪಡೆಯಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಆ) ಇಲ್ಲವಾದಲ್ಲಿ, ಬಾಡಿಗೆ ಆಧಾರದ ಮೇಲೆ ಒಪ್ಪಂದ ಮಾಡಿ–ಕೊಳ್ಳಲಾಗಿದೆಯೇ ; ಮಾಡಿದ್ದಲ್ಲಿ, ಮಾಸಿಕ ಎಷ್ಟು ಮೊತ್ತವನ್ನು ಬಾಡಿಗೆ ಆಧಾರದಲ್ಲಿ ನೀಡಲಾಗುತ್ತಿದೆ ; ಈವರೆಗೆ ಪಾವತಿಯಾಗಿರುವ ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯಂತ್ರ / ವಾಹನಗಳು ಸಮರ್ಪಕವಾಗಿ ಉಪಯೋಗ–ವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಸಮರ್ಪಕ ಉಪಯೋಗ ಮಾಡಲು ಕೈಗೊಂಡಿರುವ ಕ್ರಮಗಳೇನು ; ಇಲ್ಲವಾದಲ್ಲಿ ಇದನ್ನು ಉಪಯೋಗಿಸದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಖಾಲಿ ಇರುವ ಪೇದೆಗಳ ಹುದ್ದೆಗಳನ್ನು ಭರ್ತಿ ಮಾಡುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೧೮ (೧೯೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿನ ಠಾಣೆಗಳಲ್ಲಿ ಖಾಲಿ ಇರುವ ಪೊಲೀಸ್ ಪೇದೆಗಳ ಹುದ್ದೆಗಳೆಷ್ಟು ; (ಠಾಣಾವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಬಹಳಷ್ಟು ಪೇದೆಗಳ ಹುದ್ದೆಗಳು ಖಾಲಿ ಇರುವುದರಿಂದ ಜಿಲ್ಲೆಯಲ್ಲಿ ಕ್ರಿಮಿನಲ್ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; (ಮಾಹಿತಿ ನೀಡುವುದು)

## ಅಧಿಕಾರಿ / ನೌಕರರ ಹುದ್ದೆಗಳ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೯ (೨೫೫) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಲ್ಲಿನ ಒಟ್ಟು ಹುದ್ದೆಗಳೆಷ್ಟು; ಆ ಪೈಕಿ ಅಧಿಕಾರಿ ನೌಕರರ ಸಂಖ್ಯೆಯೆಷ್ಟು ;

(ಆ) ವರ್ಗ ಎ.ಬಿ.ಸಿ ಮತ್ತು ಡಿ ರೀತ್ಯಾ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವೇತನ ಶ್ರೇಣಿವಾರು ವಿವರ ನೀಡುವುದು)

(ಇ) ಇಲಾಖಾವಾರು ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು;

(ಈ) ನೌಕರರ ಸಂಬಳದ ವಾರ್ಷಿಕ ಅಂದಾಜು ವೆಚ್ಚವೆಷ್ಟು ;

(ಉ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಮತ್ತು ಕಾಲಮಿತಿಯೇನು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಉದ್ಯಾನವನ / ಆಟದ ಮೈದಾನಗಳ ಬಗ್ಗೆ

**ಶ್ರೀ ಪಿ.ಆರ್.ರಮೇಶ್ (ನಾಮ ನಿರ್ದೇಶನ ಹೊಂದಿದವರು) :–**

೨೨೦ (೨೪೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ೨೦೦೭ ರವರೆವಿಗೂ ಬಿ.ಎಂ.ಪಿ /ಸಿ.ಎಂ.ಸಿ / ಟಿ.ಎಂ.ಸಿ / ಪ್ರದೇಶದಲ್ಲಿ ರಚಿಸಿದ್ದ ಉದ್ಯಾನವನ ಹಾಗೂ ಆಟದ ಮೈದಾನಗಳ ಸಂಖ್ಯೆ ಎಷ್ಟು ; ಪ್ರತ್ಯೇಕವಾಗಿ ಆಯಾ ಸ್ಥಳೀಯ ಸಂಸ್ಥೆಗಳಿಗೆ ಅನುಗುಣವಾಗಿ ಮಾಹಿತಿಗಳನ್ನು ನೀಡುವುದು; (ಸಂಪೂರ್ಣ ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ೨೦೦೭ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೊಸದಾಗಿ ರಚನೆಯಾದ ಉದ್ಯಾನವನ ಹಾಗೂ ಆಟದ ಮೈದಾನಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಲಯವಾರು ಮಾಹಿತಿಗಳನ್ನು ನೀಡುವುದು)

(ಇ) ಬೆಂಗಳೂರು ನಗರದಲ್ಲಿ ಉದ್ಯಾನವನ ಹಾಗೂ ಆಟದ ಮೈದಾನಗಳನ್ನು ಯಾವ ಯಾವ ಉಪಯೋಗಕ್ಕೆ ಬಳಸಿಕೊಳ್ಳಲಾಗುತ್ತಿದೆ ? (ವಿವರಗಳನ್ನು ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಫ್ಲೈಓವರ್, ಅಂಡರ್‌ಪಾಸ್ , ಗ್ರೇಡ್ ಸೆಪರೇಟರ್ಸ್ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) :–**

೨೨೧ (೨೫೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು ಫ್ಲೈಓವರ್, ಅಂಡರ್‌ಪಾಸ್, ಹಾಗೂ ಗ್ರೇಡ್ ಸೆಪರೇಟರ್‌ಗಳ ಸಂಖ್ಯೆ ಎಷ್ಟು ; (ವಿವರಗಳೊಂದಿಗೆ ಸಂಬಂಧಿಸಿದ ದಾಖಲಾತಿಗಳನ್ನು ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಇತರೆ ಸಂಸ್ಥೆಗಳ ವತಿಯಿಂದ ನಿರ್ಮಿಸಿರುವ ಫ್ಲೈಓವರ್, ಅಂಡರ್ ಪಾಸ್, ಹಾಗೂ ಗ್ರೇಡ್ ಸೆಪರೇಟರ್‌ಗಳ ಸಂಖ್ಯೆ ಎಷ್ಟು; (ವಿವರಗಳೊಂದಿಗೆ ಸಂಬಂಧಿಸಿದ ದಾಖಲಾತಿಗಳನ್ನು ನೀಡುವುದು)

(ಇ) ಈ ಎಲ್ಲಾ ಫ್ಲೈಓವರ್‌ಗಳ ಮೇಲೆ ಮತ್ತು ಕೆಳಗೆ ಮಳೆ ನೀರಿನ ಮೋರಿಗಳನ್ನು ಯೋಜನಾಬದ್ಧವಾಗಿ ನಿರ್ಮಾಣ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಇದರ ಕಾರ್ಯನಿರ್ವಹಣೆಯನ್ನು ಯಾವ ಇಲಾಖೆ ಕೈಗೊಳ್ಳುತ್ತಿದೆ? (ವಿವರಗಳೊಂದಿಗೆ ಸಂಬಂಧಿಸಿದ ದಾಖಲಾತಿಗಳನ್ನು ನೀಡುವುದು)

## ಎಂ.ಎಸ್.ಐ.ಎಲ್. ಮಳಿಗೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೨ (೨೬೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಾಲಿ ಎಷ್ಟು ಎಂ.ಎಸ್.ಐ.ಎಲ್ ಅಬಕಾರಿ ಮಳಿಗೆಗಳು ಇರುತ್ತವೆ ; ಪ್ರಸಕ್ತ ಸಾಲಿನಲ್ಲಿ ಎಷ್ಟು ಹೊಸ ಅಬಕಾರಿ ಮಳಿಗೆಗಳನ್ನು ತೆರೆಯಲಾಗಿದೆ ; ಇವುಗಳ ಒಟ್ಟು ವಾರ್ಷಿಕ ವ್ಯವಹಾರ ಎಷ್ಟು; ಎಂ.ಎಸ್.ಐ.ಎಲ್ ಅಬಕಾರಿ ಮಳಿಗೆಗಳ ಮುಖಾಂತರ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಆದಾಯ ಎಷ್ಟು ; ಎಂ.ಎಸ್.ಐ.ಎಲ್ ಅಬಕಾರಿ ಮಳಿಗೆಗಳಲ್ಲಿ ಖಾಯಂ ಆಗಿ ಹಾಗೂ ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಪ್ರಸಕ್ತ ಸಾಲಿನಲ್ಲಿ ಅಬಕಾರಿ ಮುಖಾಂತರ ರಾಜ್ಯ ಸರ್ಕಾರ ಗೊತ್ತು ಮಾಡಿರುವ ತೆರಿಗೆ ಸಂಗ್ರಹದ ಗುರಿ ಎಷ್ಟು ; ಇಲ್ಲಿಯವರೆಗೆ ಸಂಗ್ರಹವಾಗಿರುವ ತೆರಿಗೆ ಮೊತ್ತ ಎಷ್ಟು ; ರಾಜ್ಯದಲ್ಲಿ ಉತ್ಪಾದನೆಯಾಗುವ ಮದ್ಯದಲ್ಲಿ ಎಷ್ಟು ಪ್ರಮಾಣದ ಮದ್ಯವು ಹೊರ ರಾಜ್ಯಗಳಿಗೆ ಮಾರಾಟವಾಗುತ್ತಿದೆ ;

(ಇ) ಅಬಕಾರಿ ಇಲಾಖೆಗೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು ; ಹಾಲಿ ಇರುವ ಸಿಬ್ಬಂದಿಯಲ್ಲಿ ಎಷ್ಟು ಮಂದಿ ಪದೋನ್ನತಿ ಹೊಂದಲು ಬಾಕಿ ಇರುತ್ತಾರೆ ; ಎಷ್ಟು ವರ್ಷಗಳಿಗೊಮ್ಮೆ ಅವರ ಸೇವಾವಧಿಯಲ್ಲಿ ಪದೋನ್ನತಿ ನೀಡಲಾಗುತ್ತಿದೆ;

(ಈ) ಹೊರ ರಾಜ್ಯಗಳಲ್ಲಿ ಉತ್ಪಾದನೆಯಾಗುವ ಎಷ್ಟು ಪ್ರಮಾಣದ ಮದ್ಯ ಪ್ರತಿ ವರ್ಷ ಕರ್ನಾಟಕದಲ್ಲಿ ಮಾರಾಟವಾಗುತ್ತದೆ ; ಅವುಗಳಲ್ಲಿ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ತೆರಿಗೆಯ ಪ್ರಮಾಣವೆಷ್ಟು?

## ಸ್ಥಳೀಯ ವೃಂದದ ಸಿಬ್ಬಂದಿ ನೇಮಕಾತಿ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೩ (೨೯೦ಎ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಂ ೩೭೧ ಜೆ ಅಡಿಯಲ್ಲಿ ಹೈದರಾಬಾದ್ – ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿಯ ಸ್ಥಳೀಯ ವೃಂದದ ಅಡಿಯಲ್ಲಿ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ನೇಮಕ ಮಾಡಲು ಎಷ್ಟು ಹುದ್ದೆಗಳಿಗೆ ಆರ್ಥಿಕ ಮಿತವ್ಯಯದಿಂದ ವಿನಾಯಿತಿ ನೀಡಲಾಗಿದೆ ; ನೀಡಿದ್ದಲ್ಲಿ; ಇಲ್ಲಿಯವರೆಗೆ ರಾಜ್ಯ ಸರ್ಕಾರ ಎಷ್ಟು ಹುದ್ದೆಗಳನ್ನು ತುಂಬಿರುತ್ತದೆ; ತುಂಬದೇ ಇದ್ದಲ್ಲಿ ಅದಕ್ಕೆ ಕಾರಣ ಏನು ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ವಿನೂತನ ಇ–ಆಡಳಿತ ಯೋಜನೆ–ಗಳನ್ನು ಜಾರಿಗೊಳಿಸಲಾಗಿದೆ ; ಎಷ್ಟು ಜಿಲ್ಲೆಗಳ ಜಿಲ್ಲಾಡಳಿತವು ವೆಬ್ ಪೇಜನ್ನು ಹೊಂದಿರುತ್ತದೆ; ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸಿ.ಡಿ.ಎ.ಸಿ. ಸಂಸ್ಥೆ ಅಭಿವೃದ್ಧಿಪಡಿಸಿದ ಭಾಷಾಂತರ ಮತ್ತು ಭಾಷಾ ಅಭಿವ್ಯಕ್ತತೆಯ ತಂತ್ರಾಂಶವನ್ನು ಅಳವಡಿಸಿಕೊಂಡಿರುತ್ತದೆಯೇ ?

## ಅಮೃತ್ ಯೋಜನೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೨೨೪ (೯೯೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರಾಭಿವೃದ್ಧಿ ಇಲಾಖೆಯು ಅಮೃತ್ ಯೋಜನೆ ಅಡಿಯಲ್ಲಿ ಇಲ್ಲಿಯವರೆಗೆ ಬೆಂಗಳೂರಿನಲ್ಲಿ ಎಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ ; ಬಾಕಿಯಿರುವ ಯೋಜನೆಗಳೆಷ್ಟು ; ಇದಕ್ಕೆ ಬಿಡುಗಡೆಯಾಗಿರುವ ಹಣ, ಪಾವತಿಯಾಗಿರುವ ಹಣವೆಷ್ಟು ;

(ಆ) ಬೆಂಗಳೂರಿನಲ್ಲಿ ಉಪ ನಗರ ರೈಲು ಯೋಜನೆಯನ್ನು ಕೈಗೊಳ್ಳಲು ಇಲ್ಲಿಯವರೆಗೆ ರಾಜ್ಯ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ; ಸದರಿ ಯೋಜನೆಯ ಅನುಷ್ಠಾನಕ್ಕೆ ಇಲ್ಲಿಯುವರೆಗೆ ರಾಜ್ಯ ಸರ್ಕಾರ ಎಷ್ಟು ಹಣವನ್ನು ವಿನಿಯೋಗಿಸಿರುತ್ತದೆ ;

(ಇ) ರಾಮನಗರ ಜಿಲ್ಲೆಯ ಬಿಡದಿ ಸ್ಮಾರ್ಟ್ ಸಿಟಿ ಯೋಜನೆಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ; ಈ ಸಂಬಂಧ ಇಲ್ಲಿಯವರೆಗೆ ಎಷ್ಟು ಹಣ ರಾಜ್ಯ ಸರ್ಕಾರ ವಿನಿಯೋಗಿಸಿರುತ್ತದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ನಗರಾಭಿವೃದ್ಧಿ ಇಲಾಖೆಯ ಸಣ್ಣ ಮತ್ತು ಮಧ್ಯಮ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಕಿಲೋಮೀಟರ್ ರಸ್ತೆಗಳನ್ನು ಅಭಿವೃದ್ಧಿ ಪಡಿಸಿರುತ್ತದೆ ; ಮುಖ್ಯ ಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಯೋಜನೆಯ ಎರಡನೇ ಮತ್ತು ಮೂರನೇ ಹಂತದಲ್ಲಿ ಎಷ್ಟು ಪೌರ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; ಇಲ್ಲಿಯವರೆಗೆ ಬಳಕೆಯಾಗಿರುವ ಹಣ ಎಷ್ಟು; ಮತ್ತು ಬಳಕೆ ಆಗದಿರುವ ಹಣ ಎಷ್ಟು ? (ವಿವರಗಳನ್ನು ನೀಡುವುದು)

## ನಗರ ಸಭೆ, ಪುರಸಭೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೨೨೫ (೨೦೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದಲ್ಲಿ ಎಷ್ಟು ನಗರ ಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳನ್ನು ಉನ್ನತೀಕರಿಸಲಾಗಿದೆ ; ಉನ್ನತೀಕರಣ (ಮೇಲ್ದರ್ಜೆಗೆ) ಕೋರಿ ಬಾಕಿಯಿರುವ ಸಂಸ್ಥೆಗಳೆಷ್ಟು ;

(ಆ) ಸ್ಥಳೀಯ ಸಂಸ್ಥೆಗಳ ಕಾರ್ಯವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಕಾರ್ಪೊರೇಟ್ ಸಂಸ್ಥೆಗಳು / ಕೈಗಾರಿಕೆಗಳು / ಉದ್ಯಮಗಳಿಂದ ಅಭಿವೃದ್ಧಿ ಕರ ಮತ್ತು ಸೇವಾ ಕರ ಸಂಗ್ರಹ ಮಾಡಲು ಕಾನೂನು ಮತ್ತು ನಿಯಮಾವಳಿಗಳಲ್ಲಿ ಅವಕಾಶ ಇದೆಯೇ ;

(ಇ) ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿಗಳು ಖಾಸಗಿ ನಿವೇಶನಗಳ ಅಭಿವೃದ್ಧಿಯ ಸಮಯದಲ್ಲಿ ರಸ್ತೆಯನ್ನು ಸ್ಥಳೀಯ ಸಂಸ್ಥೆಗಳ ಹೆಸರಿಗೆ ಅಥವಾ ಸರ್ಕಾರದ ಹೆಸರಿಗೆ ಕಡ್ಡಾಯವಾಗಿ ನೊಂದಾಯಿಸಬೇಕೆ ಸರ್ಕಾರಿ ರಸ್ತೆಗೆ ಹೊಂದಿಕೊಂಡಿರುವ ಭೂ ಪರಿವರ್ತಿತ ಏಕ ನಿವೇಶನದಲ್ಲಿ ನಿವೇಶನದ ಮಾಲೀಕರು ರಸ್ತೆಯನ್ನು ಸ್ಥಳೀಯ ಸಂಸ್ಥೆ ಹೆಸರಿನಲ್ಲಿ ಅಥವಾ ರಾಜ್ಯಪಾಲರ ಹೆಸರಿನಲ್ಲಿ ನೋಂದಾವಣಿ ಮಾಡಬೇಕೆ ;

(ಈ) ಸ್ಥಳೀಯ ಸಂಸ್ಥೆಗಳು ಯಾವ ಯಾವ ಸಂದರ್ಭಗಳಲ್ಲಿ ಮತ್ತು ಯಾವ ಯಾವ ಪ್ರಕರಣಗಳಲ್ಲಿ ಸ್ಥಳೀಯವಾಗಿ ಅವರ ಕಾರ್ಯಕ್ಷೇತ್ರಕ್ಕೆ ಸೀಮಿತವಾಗಿ ಸಾರ್ವಜನಿಕರಿಂದ ಮತ್ತು ಕೈಗಾರಿಕೆಗಳಿಂದ ಸೆಸ್ ಸಂಗ್ರಹ ಮಾಡಲು ಅವಕಾಶ ಇರುತ್ತದೆ ? (ವಿವರಗಳನ್ನು ಒದಗಿಸುವುದು)

## ವಾರ್ತಾ ಇಲಾಖೆ ಜಾಹಿರಾತು ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೨೨೬ (೨೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ೧೩–೦೫–೨೦೧೩ ರಿಂದ ಇಲ್ಲಿಯವರೆಗೆ ನೀಡಿರುವ ರಾಜ್ಯ ಸರ್ಕಾರದ ಜಾಹಿರಾತುಗಳ ಮೊತ್ತ ಎಷ್ಟು; ಯಾವ ಯಾವ ಇಲಾಖೆಯು ಎಷ್ಟು ಮೊತ್ತದ ಜಾಹಿರಾತನ್ನು ಇಲ್ಲಿಯವರೆಗೆ ನೀಡಲಾಗಿದೆ ; (ವಿವರ ನೀಡುವುದು)

(ಆ) ಇಲಾಖೆಗೆ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾಗಿರುವ ಆಯವ್ಯಯದ ಅನುದಾನ ಎಷ್ಟು; ಬಿಡುಗಡೆಯಾಗಿರುವ ಅನುದಾನ ಎಷ್ಟು; ಹೆಚ್ಚುವರಿಯಾಗಿ ಖರ್ಚಾಗಿದ್ದಲ್ಲಿ, ಖರ್ಚಾಗಿರುವ ಹಣ ಎಷ್ಟು;

## ಪೊಲೀಸ್ ವಸತಿ ಗೃಹ ಯೋಜನೆ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೨೨೭ (೨೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೊಲೀಸ್ ಗೃಹ ೨೦೨೦ ಯೋಜನೆಯಲ್ಲಿ ಇಲ್ಲಿಯವರೆಗೆ ಕರ್ನಾಟಕದಲ್ಲಿ ಎಷ್ಟು ವಸತಿ ಗೃಹಗಳನ್ನು ನಿರ್ಮಿಸಲಾಗಿದೆ ; ನಿರ್ಮಿಸದೇ ಇದ್ದಲ್ಲಿ ಯಾವ ಸಮಯದೊಳಗೆ ನಿರ್ಮಿಸಲಾಗುವುದು ;

(ಆ) ರಾಜ್ಯ ಗೃಹ ಇಲಾಖೆಯು ರಾಜ್ಯದಲ್ಲಿ ಎಷ್ಟು ಜೈಲುಗಳನ್ನು ಹೊಂದಿರುತ್ತದೆ ; ಹೊಸದಾಗಿ ಜೈಲು ಕಟ್ಟಡಗಳನ್ನು ಹೊಂದುವ ಯೋಜನೆ ಸರ್ಕಾರದ ಮುಂದೆ ಇದೆಯೇ ; ರಾಜ್ಯದಲ್ಲಿರುವ ಅನುಮೋದಿತ ಜೈಲು ಸಿಬ್ಬಂದಿಯ ಸಂಖ್ಯೆ ಎಷ್ಟು ; ಇವುಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು ; ಪ್ರತಿ ಎಷ್ಟು ವರ್ಷಕ್ಕೊಮ್ಮೆ ಜೈಲು ಸಿಬ್ಬಂದಿಗೆ ಸೇವಾ ಹಿರಿತನದ ಮೇಲೆ ಪದೋನ್ನತಿ ನೀಡಲಾಗಿದೆ ; ಜೈಲು ಸಿಬ್ಬಂದಿಯ ಪದೋನ್ನತಿ ಬಾಕಿ ಇದೆಯೇ ; ಇದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು ;

(ಇ) ಕಾರ್ಯನಿಮಿತ್ತ ಬೆಂಗಳೂರಿಗೆ ಬರುವ ಪೊಲೀಸ್ ಸಿಬ್ಬಂದಿಗೆ ಬೆಂಗಳೂರಿನಲ್ಲಿ ಅತಿಥಿ ಗೃಹವನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸದೇ ಇದ್ದಲ್ಲಿ, ಯಾವಾಗ ನಿರ್ಮಿಸಲಾಗುವುದು ;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ಪೊಲೀಸ್ ಠಾಣೆಯ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ ; ಎಷ್ಟು ಪೊಲೀಸ್ ಠಾಣೆಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ ; ಪ್ರಸಕ್ತ ಸಾಲಿನಲ್ಲಿ ಹೊಸ ಪೊಲೀಸ್ ಠಾಣೆಗಳ ಕಟ್ಟಡಗಳ ಕಾಮಗಾರಿ ಕೈಗೊಳ್ಳಲಾಗಿದೆಯೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರಸ್ತೆಗಳ ಅಭಿವೃದ್ಧಿ ಮತ್ತು ದರುಸ್ಥಿ ಕುರಿತು ದಾಖಲಿಸಲು ಸಾಫ್ಟ್‌ವೇರ್ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೨೮ (೨೮೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಸ್ತೆಗಳ ಅಭಿವೃದ್ಧಿ ಹಾಗೂ ದುರಸ್ಥಿಗೆ ಕಳೆದ ೫ ವರ್ಷಗಳಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ ;

(ಆ) ಈ ರಸ್ತೆಗಳ ಅಭಿವೃದ್ಧಿ ನಿರ್ವಹಣೆ ಹಾಗೂ ದುರಸ್ಥಿ ಕುರಿತು ಇತಿಹಾಸ ದಾಖಲಿಸುವ ಸಾಫ್ಟ್‌ವೇರ್ ಅಭಿವೃದ್ಧಿ ಪಡಿಸಲಾಗಿದೆಯೇ ;

(ಇ) ಅಭಿವೃದ್ಧಿಪಡಿಸಿದ್ದಲ್ಲಿ, ಈ ಸಾಫ್ಟ್‌ವೇರ್‌ನ್ನು ಅಧಿಕಾರಿಗಳು ಹಾಗೂ ಅಭಿಯಂತರರು ಉಪಯೋಗಿಸುತ್ತಿದ್ದಾರೆಯೇ ;

(ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ರಸ್ತೆಗಳ ಇತಿಹಾಸ ದಾಖಲೆಗಳನ್ನು ಇಡಲಾಗಿದೆಯೇ ?

## ರಾಜ್ಯದಲ್ಲಿ ಕಳೆದ ೦೩ ವರ್ಷಗಳಲ್ಲಿ ನಡೆದಿರುವ ಮಾನವ ಕಳ್ಳಸಾಗಣೆ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೨೯ (೨೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ನಡೆದ ಮಾನವ ಕಳ್ಳಸಾಗಣೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೦೩–೦೯–೨೦೧೫ರಂದು ನಡೆದ ಉನ್ನತಮಟ್ಟದ ಸಭೆಯಲ್ಲಿ ಮಾನವ ಕಳ್ಳ ಸಾಗಣೆ ತಡೆಯಲು ಸರ್ಕಾರ ತೆಗೆದುಕೊಂಡ ನಿರ್ಣಯಗಳೇನು; (ವಿವರ ನೀಡುವುದು)

(ಇ) ಮಹಿಳೆಯರ ಮತ್ತು ಮಕ್ಕಳ ಸಾಗಣೆ ತಡೆಯಲು ದೃಶ್ಯ ಮಾಧ್ಯಮ ಮತ್ತು ಮುದ್ರಣ ಮಾಧ್ಯಮದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳ ವಿವರ ನೀಡುವುದು;

(ಈ) ನಿರಂತರವಾಗಿ ಮಹಿಳೆ ಮತ್ತು ಮಕ್ಕಳ ಕಳ್ಳ ಸಾಗಣೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಸರ್ಕಾರದ ಗಮನಕ್ಕೆ ಬಂದಿದ್ದರೆ, ತೆಗೆದುಕೊಂಡ ಕ್ರಮವೇನು?

## ರಾಜ್ಯದಲ್ಲಿರುವ ಒಟ್ಟು ಪುರಸಭೆ, ನಗರ ಸಭೆ, ಪಟ್ಟಣ ಪಂಚಾಯ್ತಿಗಳ ಸಂಖ್ಯೆ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆಗೊಂಡ ಅನುದಾನದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೦ (೨೪೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಪುರಸಭೆ, ನಗರ ಸಭೆ ಹಾಗೂ ಪಟ್ಟಣ ಪಂಚಾಯ್ತಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಸದರಿ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದಿಂದ ಬಿಡುಗಡೆಗೊಳಿಸಿದ ಅನುದಾನ ಎಷ್ಟು;

(ಇ) ಸದರಿ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ? (ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

## ನಗರೋತ್ಥಾನ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆಯಾದ ಹಣ ಮತ್ತು ಕಾರ್ಯಕ್ರಮಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೧ (೨೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಮುಖ್ಯಮಂತ್ರಿ ನಗರೋತ್ಥಾನ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆಯಾದ ಹಣವೆಷ್ಟು;

(ಆ) ಸದರಿ ಯೋಜನೆಯಡಿ ಬಿಡುಗಡೆಯಾದ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ/ಅಭಿವೃದ್ಧಿ ಕಾಮಗಾರಿಗಳಿಗೆ/ಇತರೆ ಚಟುವಟಿಕೆಗಳಿಗೆ ಬಳಸಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಹಣವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್‌ಗಳಿಗೆ ವಾರ್ಡ್‌ವಾರು ಹಂಚಿಕೆ ಮಾಡಲಾಗಿದೆಯೇ; ಹಂಚಿಕೆಯಾಗಿದ್ದಲ್ಲಿ, ವಾರ್ಡ್‌ವಾರು ವಿವರವಾದ ಮಾಹಿತಿ ಒದಗಿಸುವುದು?

## ಗೃಹ ಇಲಾಖೆಯಿಂದ ಹಾವೇರಿ ಜಿಲ್ಲೆಗೆ ಬಂದ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೨ (೨೦೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩-೧೪ ರಿಂದ ೨೦೧೭-೧೮ರವರೆಗೆ ಗೃಹ ಇಲಾಖೆಯಿಂದ ಹಾವೇರಿ ಜಿಲ್ಲೆಗೆ ಯಾವ ಯಾವ ಯೋಜನೆಗಳಡಿಯಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಂದಿದೆ; (ತಾಲ್ಲೂಕುವಾರು ಕಾಮಗಾರಿಗಳವಾರು ಅನುದಾನವಾರು, ವರ್ಷವಾರು ವಿವರ ಹಾಗೂ ಶಿಗ್ಗಾಂವ್ ಸವಣೂರು ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

(ಆ) ಸದರಿ ಯೋಜನೆಗಳ ಅಡಿಯಲ್ಲಿ ಕೈಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; ಆ ಪೈಕಿ ಪೂರ್ಣಗೊಂಡ ಕಾಮಗಾರಿಗಳು, ಚಾಲ್ತಿಯಲ್ಲಿರುವ ಕಾಮಗಾರಿಗಳು ಮತ್ತು ಉಳಿದಿರುವ ಕಾಮಗಾರಿಗಳು ಎಷ್ಟು; ವಿಳಂಬಕ್ಕೆ ಕಾರಣಗಳೇನು; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಯೋಜನೆಗಳಿಗೆ ಒದಗಿಸಲಾದ ಅನುದಾನದ ಪೈಕಿ ಖರ್ಚಾದ ಮತ್ತು ಉಳಿದಿರುವ ಮೊತ್ತ ಎಷ್ಟು; ಖರ್ಚಾಗದೆ ಬಾಕಿ ಉಳಿಯಲು ಕಾರಣವೇನು? (ವರ್ಷವಾರು ಕಾಮಗಾರಿಗಳವಾರು, ಶಿಗ್ಗಾಂವ್-ಸವಣೂರು ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

## ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಡೆದ ಕೋಮು ಗಲಭೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೩೩ (೨೨೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಡೆದ ಕೋಮು ಗಲಭೆಗಳ ಸಂಖ್ಯೆ ಎಷ್ಟು; ಎಲ್ಲೆಲ್ಲಿ ನಡೆದಿವೆ; (ವಿವರ ನೀಡುವುದು)

(ಆ) ಈ ಕೋಮು ಗಲಭೆಗಳ ಕಾರಣದಿಂದ ಮರಣಹೊಂದಿದ/ ಕೊಲೆಯಾದವರ ಸಂಖ್ಯೆ ಎಷ್ಟು; ಈ ಗಲಭೆಗಳಿಗೆ ಕಾರಣವಾದ ಅಂಶಗಳು ಯಾವುವು; ಗಲಭೆಗಳಿಗೆ ಕಾರಣರಾದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; (ಪ್ರಕರಣಗಳವಾರು ವಿವರ ನೀಡುವುದು)

(ಇ) ಈ ಗಲಭೆಗಳಿಗೆ ಕಾರಣರಾದವರ ಮೇಲೆ ಹೂಡಲಾದ ಕೇಸ್‌ಗಳನ್ನು ವಾಪಸ್ ಪಡೆಯಲಾಗಿದೆಯೇ; ಹಾಗಿದ್ದಲ್ಲಿ, ಅವು ಯಾವುವು; ಪ್ರಕರಣಗಳವಾರು ವಿವರಗಳನ್ನು ನೀಡುವುದು;

(ಈ) ರಾಜ್ಯದಲ್ಲಿನ ಹಲವು ಪ್ರಕರಣಗಳ ಮೇಲಿನ ಕೇಸ್‌ಗಳನ್ನು ವಾಪಸ್ ಪಡೆಯಲಾಗುವುದು ಎಂದು ಮುಖ್ಯಮಂತ್ರಿಗಳು ಆಶ್ವಾಸನೆ ನೀಡಿದ್ದು, ಆ ಪ್ರಕಾರ ದಿನಾಂಕ:೨೭-೦೧-೨೦೧೮ರವರೆವಿಗೆ ವಾಪಸ್ ಪಡೆಯಲಾದ ಕೇಸ್‌ಗಳು ಯಾವುವು? (ಪ್ರಕರಣಗಳವಾರು ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೩೪ (೨೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನ ತ್ಯಾಜ್ಯ ವಸ್ತು ವಿಲೇವಾರಿಗಾಗಿ ಹೊರಗುತ್ತಿಗೆಯಿಂದ ನೇಮಕ ಮಾಡಲಾದ ನೌಕರರ ಸಂಖ್ಯೆ ಎಷ್ಟು; ಹೊರಗುತ್ತಿಗೆಯಿಂದ ತೆಗೆದುಕೊಳ್ಳಲಾಗಿರುವ ಹುದ್ದೆಗಳು ಯಾವುವು;

(ಆ) ಪೌರಾಡಳಿತ ಇಲಾಖೆಯಿಂದ ೨೦೧೭ನೇ ಡಿಸೆಂಬರ್ ಮಾಹೆಯಲ್ಲಿ ಜಾರಿಗೊಳಿಸಲಾದ ಆದೇಶದಂತೆ ಪ್ರತಿ ೭೦೦ ಜನಸಂಖ್ಯೆಗೆ ಒಬ್ಬರಂತೆ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಮಾತ್ರ ಅವಕಾಶ ಎಂದು ತಿಳಿಸಿದ್ದು, ಇದರಿಂದ ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಲ್ಲಿ ಸ್ವಚ್ಛತೆ ಮತ್ತು ಘನ ತ್ಯಾಜ್ಯ ವಸ್ತು ವಿಲೇವಾರಿಗೆ ಆಗುವ ಸಮಸ್ಯೆಯನ್ನು ಸರ್ಕಾರ ಮನಗಂಡಿದೆಯೇ; (ವಿವರ ನೀಡುವುದು)

(ಇ) ಈ ಆದೇಶ ಜಾರಿಗೆ ಬಂದಲ್ಲಿ, ಪ್ರಸ್ತುತ ಹೊರಗುತ್ತಿಗೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಹುದ್ದೆ ಕಳೆದುಕೊಂಡು, ನಿರುದ್ಯೋಗಿಗಳಾಗುತ್ತಾರೆ, ಹಾಗೂ ಸ್ವಚ್ಛತೆ ಮತ್ತು ಘನ ತ್ಯಾಜ್ಯ ವಸ್ತು ವಿಲೇವಾರಿಗಾಗಿ ಸಮಸ್ಯೆ ಹೆಚ್ಚಾಗಲಿದ್ದು, ಸರ್ಕಾರ ಈ ವಿಚಾರದಲ್ಲಿ ಕೈಗೊಳ್ಳಲಿರುವ ಕ್ರಮಗಳೇನು? (ವಿವರ ನೀಡುವುದು)

## ನಗರ, ಪಟ್ಟಣ ಪಂಚಾಯತಿಗಳಲ್ಲಿ ಚರಂಡಿ ಕಾಮಗಾರಿಗಳ ಕೆಲಸಗಳಿಗೆ ಅನುದಾನ ವಿಳಂಬದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೫ (೨೩೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ರಾಜ್ಯದಲ್ಲಿರುವ ನಗರ ಮತ್ತು ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಗೆ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ನಗರ/ಪಟ್ಟಣ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ನಗರ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಒಳಚರಂಡಿ ಕಾಮಗಾರಿಗಳು ಅನುಮೋದನೆಯಾಗಿ ಅನುದಾನ ಬಿಡುಗಡೆಯಾಗದಿರುವ ಪ್ರಕರಣಗಳಾವುವು; ಇದ್ದಲ್ಲಿ, ಅವುಗಳ ಮಾಹಿತಿ ನೀಡುವುದು;

(ಇ) ಅನುಮೋದನೆಯಾದ ಕಾಮಗಾರಿಗಳಿಗೆ ಬಿಡುಗಡೆ ಮಾಡಬೇಕಾಗಿರುವ ಅನುದಾನ ಎಷ್ಟು; (ಮಾಹಿತಿ ನೀಡುವುದು)

(ಈ) ಈ ರೀತಿಯ ವಿಳಂಬಕ್ಕೆ ಕಾರಣಗಳೇನು; ಅನುದಾನ ಬಿಡುಗಡೆ ಮಾಡಲು ಸಮಯ ನಿಗಧಿಗೊಳಿಸಲಾಗಿದೆಯೇ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಡೆಯುತ್ತಿರುವ ದಲಿತರ ಮೇಲಿನ ಕೊಲೆ ಮತ್ತು ಅತ್ಯಾಚಾರಗಳನ್ನು ತಡೆಗಟ್ಟುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೩೬ (೨೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೩ ರಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಮೇಲೆ ನಡೆದ ಕೊಲೆ ಮತ್ತು ಅತ್ಯಾಚಾರ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ದಲಿತರ ಮೇಲೆ ನಡೆಯುತ್ತಿರುವ ಕೊಲೆ ಮತ್ತು ಅತ್ಯಾಚಾರದಂತಹ ದೌರ್ಜನ್ಯವನ್ನು ತಡೆಯಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿ ದಲಿತರ ಮೇಲಿನ ದೌರ್ಜನ್ಯ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಅಗತ್ಯ ಕ್ರಮಗಳೇನು? (ಮಾಹಿತಿ ನೀಡುವುದು)

## ಮಂಡ್ಯ ನಗರದಲ್ಲಿನ ಉದ್ಯಾನವನಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೩೭ (೨೪೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಒಟ್ಟು ಉದ್ಯಾನವನಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಉದ್ಯಾನವನಗಳ ನಿರ್ವಹಣೆಗೆ ನಗರಸಭೆ ಕೈಗೊಂಡಿರುವ ಅಗತ್ಯ ಕ್ರಮಗಳೇನು;

(ಇ) ಉದ್ಯಾನವನಗಳ ನಿರ್ವಹಣೆಯನ್ನು ನಗರಸಭೆಯೇ ನಿರ್ವಹಿಸುತ್ತಿದೆಯೇ ಅಥವಾ ಹೊರಗುತ್ತಿಗೆ ಮೇಲೆ ನೀಡಲಾಗಿದೆಯೇ;

(ಈ) ಸದರಿ ಉದ್ಯಾನವನಗಳನ್ನು ಸಮರ್ಪಕವಾಗಿ ನಿರ್ವಹಿಸಿ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಈ ಉದ್ಯಾನವನಗಳ ಅಭಿವೃದ್ಧಿಗೆ ಅನುದಾನವನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ ವಿವರ ನೀಡುವುದು;

(ಊ) ಸದರಿ ಉದ್ಯಾನವನಗಳನ್ನು ಅಭಿವೃದ್ಧಿ ಪಡಿಸುವುದು ಯಾವಾಗ?

## ಮಂಡ್ಯ ನಗರದಲ್ಲಿನ ತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೩೮ (೨೮೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್‌ಗಳಲ್ಲಿ ತ್ಯಾಜ್ಯ ವಿಲೇವಾರಿ–ಸಮರ್ಪಕವಾಗಿ ನಡೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ತ್ಯಾಜ್ಯ ವಿಲೇವಾರಿ ನಿರ್ವಹಣೆಗಾಗಿ ಅನುಮೋದನೆಗೊಂಡ ಹುದ್ದೆಗಳೆಷ್ಟು; ಖಾಲಿಯಿರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು; ಯಾವಾಗ;

(ಈ) ಒಣ ಮತ್ತು ದ್ರವ ತ್ಯಾಜ್ಯಗಳನ್ನು ವಿಂಗಡಿಸಿ ಮಂಡ್ಯ ನಗರ ವ್ಯಾಪ್ತಿಯಲ್ಲಿ ವೈಜ್ಞಾನಿಕವಾಗಿ ಮತ್ತು ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ನಗರಸಭೆ ಹಾಗೂ ಇತರ ಪಟ್ಟಣಗಳಲ್ಲಿ ಈಗಾಗಲೇ ಖಾತೆ ಹೊಂದಿರುವ ಜಾಗದಲ್ಲಿ ಕಟ್ಟಡ ನಿರ್ಮಿಸಲು ಭೂ ಪರಿವರ್ತನೆ ಕಡ್ಡಾಯಗೊಳಿಸಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೯ (೨೨೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ನಗರ ಹಾಗೂ ಪಟ್ಟಣಗಳ ವ್ಯಾಪ್ತಿಯೊಳಗೆ ನೂರಾರು ವರ್ಷಗಳಿಂದ ತೆರಿಗೆ ಪಾವತಿಸಿ, ಖಾತೆ ಹೊಂದಿರುವ ಜಾಗದಲ್ಲಿರುವ ಮನೆಗಳನ್ನು ಕೆಡವಿ ಹೊಸದಾಗಿ ನಿರ್ಮಿಸಲು ಅಥವಾ ದುರಸ್ಥಿಗೊಳಿಸಲು ಸದರಿ ನಿವೇಶನವನ್ನು ಭೂ

ಪರಿವರ್ತನೆ ಮಾಡಬೇಕೆಂದು ಆದೇಶ ಹೊರಡಿಸಿರುವುದರಿಂದ ಖಾತೆದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಆದೇಶವನ್ನು ಹಿಂಪಡೆದು ಸಾರ್ವಜನಿಕರಿಗೆ ಆಗಿರುವ ಅನಾನುಕೂಲತೆಯನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು?

## ರಸ್ತೆಗಳ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೦ (೨೨೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗಿನ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಇರುವ ರಸ್ತೆಗಳು ಅತಿವೃಷ್ಟಿಯಿಂದ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಅತೀ ಹೆಚ್ಚು ಪ್ರವಾಸಿಗರು ಭೇಟಿ ನೀಡುವ ಈ ನಗರ ಹಾಗೂ ಪಟ್ಟಣಗಳಲ್ಲಿ ಹಾಳಾಗಿರುವ ರಸ್ತೆಗಳಿಗೆ ತುರ್ತು ಅನುದಾನ ಬಿಡುಗಡೆಗೊಳಿಸಿ ಅಭಿವೃದ್ಧಿಪಡಿಸಲಾಗುವುದೇ? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಖಾಲಿ ಇರುವ ಅಬಕಾರಿ ಇಲಾಖೆಯ ಹುದ್ದೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೧ (೨೩೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅಬಕಾರಿ ಇಲಾಖೆಗೆ ಸೇರಿದ ಸ್ವಂತ ಕಟ್ಟಡಗಳ ಸಂಖ್ಯೆ ಎಷ್ಟು; ಅವು ಎಲ್ಲೆಲ್ಲಿ ಇವೆ; ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಕಛೇರಿ ಕಟ್ಟಡಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಜಿಲ್ಲೆಯಲ್ಲಿರುವ ಇಲಾಖೆಯ ಅಧಿಕಾರಿಗಳ/ಸಿಬ್ಬಂದಿ ವಸತಿ ನಿಲಯಗಳ ಸಂಖ್ಯೆ ಎಷ್ಟು; ಅವು ಎಲ್ಲೆಲ್ಲಿ ಇವೆ; ಇಲ್ಲದೆ ಇರುವ ತಾಲ್ಲೂಕುಗಳಲ್ಲಿ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಪೌರಾಡಳಿತ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರ ವೇತನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨ (೨೩೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪೌರಾಡಳಿತ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಆ ಸಿಬ್ಬಂದಿಗಳ ವೇತನವನ್ನು ಇದುವರೆವಿಗೂ ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವೇತನ ಪಾವತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಮಂಗಳೂರು ಮಹಾನಗರ ಪಾಲಿಕೆಯ ತುಂಬೆ ವೆಂಟೆಡ್‌ಡ್ಯಾಂ ನೀರಿನ ಮಟ್ಟದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೩ (೨೨೨) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಮಹಾನಗರ ಪಾಲಿಕೆಯ ತುಂಬೆ ವೆಂಟೆಡ್‌ಡ್ಯಾಂನ ನೀರಿನ ಮಟ್ಟದ ಏರಿಕೆಯಿಂದ ಮುಳುಗಡೆಯಾದ ರೈತರಿಗೆ ಪರಿಹಾರ ಒದಗಿಸಲಾಗಿದೆಯೇ; (ವಿವರ ಒದಗಿಸುವುದು)

(ಆ) ತುಂಬೆ ಡ್ಯಾಂನಿಂದ ನಗರ ಪಾಲಿಕೆ ವ್ಯಾಪ್ತಿಗೆ ಪ್ರತಿದಿನ ಎಷ್ಟು ನೀರಿನ ಅವಶ್ಯಕತೆ ಇರುವುದು; ನೀರಿನ ಸೋರುವಿಕೆಯನ್ನು ತಡೆಯಲು ನಗರ ಪಾಲಿಕೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಇ) ಮಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಉಪ್ಪು ನೀರು ಶುದ್ಧಿಕರಿಸುವಿಕೆಯ ಪ್ರಸ್ತಾವನೆ ಇಲಾಖೆ ಮುಂದೆ ಇದೆಯೇ; (ವಿವರ ಒದಗಿಸುವುದು)

(ಈ) ನಗರ ಪಾಲಿಕೆ ವ್ಯಾಪ್ತಿಯ ನೀರಿನ ಬಿಲ್ ಸಂಗ್ರಹಣೆ ಕೈಗೊಂಡಡಿರದೇ ಇರವ ಆರೋಪವಿರುವುದು ನಿಜವೇ; ನೀರಿನ ಬಳಕೆಯಿಂದ ಸಂಗ್ರಹವಾಗಿರುವ ಆದಾಯ ಎಷ್ಟು? (ವಿವರ ಒದಗಿಸುವುದು)

## ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ವಿಸ್ತರಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೪ (೨೨೪) ಮಾನ್ಯ ನಗರಾಭೀವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ವಿಸ್ತರಿಸಿ ಮುಲ್ಕಿ ಮತ್ತು ಬಜಪೆ ಪ್ರದೇಶಗಳನ್ನು ನಗರ ಪಾಲಿಕೆ ವ್ಯಾಪ್ತಿಯ ಒಳಗೆ ತರುವ ಪ್ರಸ್ತಾವನೆ ಯಾವ ಹಂತದಲ್ಲಿದೆ; (ವಿವರ ಒದಗಿಸುವುದು)

(ಆ) ಪ್ರಸ್ತುತ ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಜನಸಂಖ್ಯೆ ಎಷ್ಟು;

(ಇ) ಮಂಗಳೂರು ನಗರ ಪಾಲಿಕೆಯ ವಲಯ ಕಛೇರಿಗಳಿಗೆ ಸ್ವಂತ ಕಛೇರಿ ನಿರ್ಮಿಸುವ ಬಗ್ಗೆ ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ; (ವಿವರ ಒದಗಿಸುವುದು)

(ಈ) ನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಿಸಲಾದ ಕಟ್ಟಡಗಳು ಮತ್ತು ಪಾರ್ಕಿಂಗ್‌ಗಳೆಷ್ಟು; ಇವುಗಳಲ್ಲಿ ಕಮರ್ಶಿಯಲ್ ಉದ್ದೇಶಕ್ಕಾಗಿ ಬಳಕೆಯಾಗುತ್ತಿರುವುದೆಷ್ಟು; ಈ ಅನಧಿಕೃತ ಕಟ್ಟಡಗಳನ್ನು ಗುರುತಿಸಿ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ರಾಜ್ಯದಲ್ಲಿ ಮಾಧಕ ದ್ರವ್ಯಗಳ ಮಾರಾಟದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೫ (೨೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಾಧಕ ದ್ರವ್ಯಗಳ ಮಾರಾಟ ಮತ್ತು ಸೇವನೆಯನ್ನು ತಪ್ಪಿಸಲು ಇಲಾಖೆ ಕೈಗೊಂಡಿರುವ ಕ್ರಮವೇನು; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಮಾಧಕ ದ್ರವ್ಯ ಅಪರಾಧ ಪತ್ತೆ ದಳಗಳನ್ನು ನೇಮಿಸಲಾಗಿದೆ; ಎಷ್ಟು ವಿಶೇಷ ಪೊಲೀಸ್ ಠಾಣೆಗಳನ್ನು ತೆರೆಯಲಾಗಿದೆ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಮಾಧಕ ದ್ರವ್ಯಗಳನ್ನು ಸೇವನೆ ಮಾಡುವ ಒಟ್ಟು ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ? (ಜಿಲ್ಲಾವಾರು ವಿವರ ನೀಡುವುದು)

## ಕೋಮು ಗಲಭೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೬ (೧೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿ ಕೋಮು ಗಲಭೆಗೆ ಒಳಗಾಗಿರುವ ಜನರ ಸಂಖ್ಯೆ ಎಷ್ಟು; ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ; (ವಿವರ ಒದಗಿಸುವುದು)

(ಆ) ಕೋಮು ಗಲಭೆಗಳಲ್ಲಿ ಭಾಗಿಯಾಗಿರುವ ಸಂಘಟನೆಗಳ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು; ಯಾವ ಸಂಘಟನೆಗಳು ಭಾಗಿಯಾಗಿದೆ; (ವಿವರ ಒದಗಿಸುವುದು)

(ಇ) ಕೋಮು ಗಲಭೆಗಳಿಗೆ ಪ್ರೋತ್ಸಾಹಿಸುವ ಸಂಘಟನೆಗಳ ಬಗ್ಗೆ ಇಲಾಖೆಯು ತನಿಖೆ ನಡೆಸಿದೆಯೇ; (ವಿವರ ನೀಡುವುದು)

(ಈ) ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ಎಷ್ಟು ಮಂದಿಗೆ ಗಡಿಪಾರು ಮಾಡಲಾಗಿದೆ ? (ವಿವರ ನೀಡುವುದು)

## ಪಂಚಾಯತ್‌ಗಳನ್ನು ನಗರ ಪಂಚಾಯತ್‌ಗಳನ್ನಾಗಿ ಮಾರ್ಪಾಡಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೨೪೭ (೨೨೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಶಿರ್ವ, ಪಡುಬಿದ್ರಿ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆಯ ಕಿನ್ನಿಗೋಳಿ, ಬಜಪೆ ಪಂಚಾಯಿತಿಗಳನ್ನು ನಗರ ಪಂಚಾಯಿತಿಗಳನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ಒದಗಿಸುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಪುರಸಭೆ ಮತ್ತು ಪಂಚಾಯಿತಿಗೆ ೨೦೧೫–೧೬, ೧೭–೧೮ನೇ ಸಾಲಿನಲ್ಲಿ ಬಿಡುಗಡೆಗೊಳಿಸಿದ ಅನುದಾನ ಎಷ್ಟು;ಯಾವ ಯಾವ ಉದ್ದೇಶಕ್ಕಾಗಿ ಅನುದಾನ ಒದಗಿಸಲಾಗಿದೆ; (ವಿವರ ಒದಗಿಸುವುದು)

(ಇ) ನಗರ ಪಂಚಾಯತ್ ಪುರಸಭೆ ಮತ್ತು ನಗರ ಸಭೆಗಳಲ್ಲಿ ಅರ್ಹತೆ ಇಲ್ಲದ ಅಧಿಕಾರಿಗಳನ್ನು ಆಯುಕ್ತರಾಗಿ ನೇಮಿಸಿರುವುದು ನಿಜವೇ; (ವಿವರ ಒದಗಿಸುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯುಕ್ತರುಗಳ ಅರ್ಹತೆಯ ಬಗ್ಗೆ ವಿವರ ನೀಡುವುದು?

## ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ಗೃಹ ಇಲಾಖೆಯ ಯೋಜನೆಗಳ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮ ನಿರ್ದೇಶನ ಹೊಂದಿದವರು) :–**

೨೪೮ (೧೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಗೆ ಗೃಹ ಇಲಾಖೆಯು ವತಿಯಿಂದ ಹಮ್ಮಿಕೊಂಡಿರುವ ಯೋಜನೆಗಳಾವುವು; ಅವುಗಳಿಗೆ ಮೀಸಲಿಟ್ಟಿರುವ ಅನುದಾನವೆಷ್ಟು; (ವಿವರ ಒದಗಿಸುವುದು)

(ಆ) ಅವುಗಳ ರೂಪರೇಷೆಗಳೇನು; (ವಿವರ ಒದಗಿಸುವುದು)

(ಇ) ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ಗೃಹ ಇಲಾಖೆಗೆ ಹೊಸ ಪ್ರಸ್ತಾವನೆಗಳೇನಾದರು ಬಂದಿದೆಯೇ;

(ಈ) ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ಹನೂರು ಪಟ್ಟಣ ಪಂಚಾಯತಿಗೆ ಮಳಿಗೆಗಳಿಂದ ಬರಬೇಕಾದ ಬಾಡಿಗೆ ಬಾಕಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೯ (೨೯೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹನೂರು ಪಟ್ಟಣ ಪಂಚಾಯತಿಯಿಂದ ಬಾಡಿಗೆಗೆ ಕೊಟ್ಟಿರುವ ಅಂಗಡಿ ಮಳಿಗೆಗಳ ಸಂಖ್ಯೆ ಎಷ್ಟು; ಆ ಪೈಕಿ ಎಷ್ಟು ಮಳಿಗೆಗಳಿಂದ ಬಾಡಿಗೆ ಬಾಕಿ ಬರಬೇಕಾಗಿದೆ; ಬಾಕಿ ವಸೂಲಿಗೆ ಕೈಗೊಂಡಿರುವ ಕ್ರಮ ಏನು;

(ಆ) ನೂತನ ಬಸ್ ನಿಲ್ದಾಣದಲ್ಲಿ ಎಷ್ಟು ಅಂಗಡಿಗಳನ್ನು ನಿರ್ಮಿಸಲಾಗಿದೆ ಹರಾಜು ಪ್ರಕ್ರಿಯೆಯಲ್ಲಿ ಈ ಮಳಿಗೆಗಳನ್ನು

ಬಾಡಿಗೆಗೆ ನೀಡಲಾಗಿದೆಯೇ; ನೀಡಿದಲ್ಲಿ, ವಾರ್ಷಿಕ ಬಾಡಿಗೆ ಹಣ ಎಷ್ಟು; ಇದುವರೆಗೆ ಬಿಡ್‌ದಾರರು ಒಪ್ಪಂದವನ್ನು ರಿಜಿಸ್ಟರ್ ಮಾಡಿಸಿಕೊಳ್ಳದೇ ಇರುವುದರಿಂದ ಮರು ಹರಾಜು ಮಾಡಲಾಗುವುದೇ?

## ಯಳಂದೂರು ಪಟ್ಟಣಕ್ಕೆ ಶುದ್ಧೀಕರಿಸದೆ ಕಾವೇರಿ ನೀರು ಸರಬರಾಜು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೦ (೨೯೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಳಂದೂರು ಪಟ್ಟಣಕ್ಕೆ ಸರಬರಾಜಾಗುತ್ತಿರುವ ಕಾವೇರಿ ಕುಡಿಯುವ ನೀರಿಗೆ ಕ್ಲೋರಿನ್ ಹಾಕಿ ಶುದ್ಧೀಕರಿಸದೇ ಸರಬರಾಜು ಮಾಡುತ್ತಿರುವುದು ಗಮನಕ್ಕೆ ಬಂದಿದೆಯೇ; ಕೂಡಲೇ ಕೆಟ್ಟುಹೋಗಿರುವ ಈ ಯಂತ್ರವನ್ನು ಸರಿಪಡಿಸಿ ಸಾಕಷ್ಟು ಅನುದಾನ ನೀಡಿ ಶುದ್ಧಿಕರಿಸಿದ ನೀರನ್ನು ಸರಬರಾಜು ಮಾಡಲು ಕ್ರಮ ಜರುಗಿಸಲಾಗುವುದೇ;

(ಆ) ಕಳೆದ ೯ ತಿಂಗಳಿಂದ ಶುದ್ಧ ನೀರನ ಘಟಕದಲ್ಲಿ ಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ವೇತನ ಪಾವತಿಸದೇ ಇರುವುದು ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ನೌಕರರಿಗೆ ವೇತನ ಪಾವತಿ ಮಾಡಲು ಯಾವ ಕ್ರಮಗಳನ್ನು ಜರುಗಿಸಲಾಗಿದೆ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0272/800 ಪ್ರತಿಗಳು/03–02–2018